ವಿಜಯಪುರ | ಸಂಪುಟ 04 | ಸಂಚಿಕೆ 173 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಮಂಗಳವಾರ, ಸೆಪ್ಟೆಂಬರ್, 01, 2026

"ಕುಮಾರಸ್ವಾಮಿ ಅವರು ನಮ್ಮ(ಕಾಂಗ್ರೆಸ್) ವಿರುದ್ಧ ಹೋರಾಡುತ್ತಿಲ್ಲ. ಅವರು ಬಿಜೆಪಿ ವಿರುದ್ಧ ಹೋರಾಡುತ್ತಿದ್ದಾರೆ. ಅವರು ತಮ್ಮ ಕರ್ತವ್ಯ ಮಾಡಲಿ. ಯಾವುದೇ ಆರೋಪಗಳನ್ನು ಮಾಡಲಿ. ಬಿಜೆಪಿ ಇನ್ನು ಮುಂದೆ ರಾಜ್ಯದಲ್ಲಿ ಇರಬಾರದು ಎಂದು ಕುಮಾರಸ್ವಾಮಿ ಹೋರಾಟ ನಡೆಸುತ್ತಿದ್ದಾರೆ."



■ ಡಿ.ಕೆ.ಶಿವಕುಮಾರ್
ಮುಖ್ಯಮಂತ್ರಿಗಳು

## ಇಂಡಿ ತಾಲೂಕು ಬರಪೀಡಿತವೆಂದು ಘೋಷಿಸಲು ಆಗ್ರಹಿಸಿ ಧರಣಿ



■ ಉದಯರಶ್ಮಿ ದಿನಪತ್ರಿಕೆ

**ಇಂಡಿಯಲ್ಲಿ ಬಿಜೆಪಿ ರೈತ ಮೋರ್ಚಾ ನೇತೃತ್ವದಲ್ಲಿ ಬಿಜೆಪಿ ಪಕ್ಷದ ವತಿಯಿಂದ ಅನಿರ್ದಿಷ್ಟ ಧರಣಿ ಸತ್ಯಾಗ್ರಹ**

ಇಂಡಿ: ತಾಲೂಕನ್ನು ಬರಗಾಲ ಪೀಡಿತ ಪ್ರದೇಶ ಎಂದು ಘೋಷಿಸಬೇಕು ಎಂದು ಆಗ್ರಹಿಸಿ ಆಗಸ್ಟ 31 ಸೋಮವಾರದಿಂದ ನಗರದ ಬಸವೇಶ್ವರ ವೃತ್ತದಲ್ಲಿ ಬಿಜೆಪಿ ರೈತ ಮೋರ್ಚಾ ನೇತೃತ್ವದಲ್ಲಿ ಬಿಜೆಪಿ ಪಕ್ಷದ ವತಿಯಿಂದ ಅನಿರ್ದಿಷ್ಟ ಧರಣಿ ಸತ್ಯಾಗ್ರಹ ಪ್ರಾರಂಭಿಸಿದರು.

ಬಿಜೆಪಿಮಂಡಲಅಧ್ಯಕ್ಷಹಣಮಂತರಾಯಗೌಡ ಪಾಟೀಲ, ಕಾಸುಗೌಡ ಬಿರಾದಾರ, ಶೀಲವಂತ ಉಮರಾಣಿ, ಬಿ.ಎಸ್.ಪಾಟೀಲ ಹಿರೇಬೇವನೂರ, ದೇವೆಂದ್ರ ಕುಂಬಾರ, ಶಂಕರಗೌಡ ಪಾಟೀಲ, ಬಾಳು ಮುಳಜಿ, ಅನೀಲ ಜಮಾದಾರ, ಅನೀಲಗೌಡ ಬಿರಾದಾರ, ಮಲ್ಲಿಕಾರ್ಜುನ ಕಿವುಡೆ ಮಾತನಾಡಿ ತಾಲೂಕಿನಾದ್ಯಂತ ಭೀಕರ ಪರಿಸ್ಥಿತಿ ಇದ್ದರೂ ಸರಕಾರ ಇಂಡಿ ತಾಲೂಕನ್ನು ಬರಗಾಲದ ಪಟ್ಟಿಗೆ ಸೇರಿಸದಿರುವುದು ದುರ್ದೈವ. ರಾಜ್ಯ ಸರ್ಕಾರವು ಇಂಡಿ ಕ್ಷೇತ್ರದ ರೈತರ ಹಿತರಕ್ಷಣೆಯನ್ನು ಸಂಪೂರ್ಣವಾಗಿ ಮರೆತು ತೀವ್ರ ಅನ್ಯಾಯ ಎಸಗಿದೆ ಎಂದು ಆರೋಪಿಸಿದರು.

ಸರ್ಕಾರ ತನ್ನ ನಿರ್ಧಾರವನ್ನು ಮರುಪರಿಶೀಲಿಸಿ ಇಂಡಿ ತಾಲೂಕನ್ನು ಬರಗಾಲ ಪೀಡಿತ ಪ್ರದೇಶ ಎಂದು ಘೋಷಿಸಬೇಕು ಎಂದು ಬಿಜೆಪಿ ಮುಖಂಡರು ಬಲವಾಗಿ ಒತ್ತಾಯಿಸಿದರು.

ಮುಂಗಾರು ಮಳೆಯಾಗದೇ ತಾಲೂಕಿನಲ್ಲಿ ರೈತರು ಬೆಳೆದ ಬೆಳೆ ಎಲ್ಲ ಹಾನಿಗೊಂಡಿವೆ. ತಾಲೂಕಿಗೆ ಮುಂಗಾರು ಮಳೆಗೆ ಬೇಕಾದಷ್ಟು ಮಳೆಯಾಗಿಲ್ಲ, ಬೆಳೆ ಕುಂಠಿತ ಗೊಂಡಿದ್ದು ಸರಿಯಾಗಿ ಬರುವದಿಲ್ಲ. ಕಬ್ಬು ಸರಿಯಾಗಿ ದಪ್ಪ ಎತ್ತರ ಆಗುತ್ತಿಲ್ಲ. ನಿಂಬೆ ಗಿಡಗಳು ಹೂ ಬಿಡುತ್ತಿಲ್ಲ. ಹೆಸರು ತೊಗರಿ ಮೆಕ್ಕೆಜೋಳ ಸರಿಯಾಗಿ ಬರುವ ಲಕ್ಷಣಗಳಿಲ್ಲ ಎಂದು ಆರೋಪಿಸಿದರು.

ಬಿಜೆಪಿ ಮುಖಂಡರಾದ ಸಿದ್ದಲಿಂಗ ಹಂಜಗಿ, ಸಂತೋಷ ಪಾಟೀಲ, ರಾಮಸಿಂಗ ಕನ್ನೊಳ್ಳಿ, ಮಹೇಶ ಹೂಗಾರ, ಮಲ್ಲು ಗುಡ್ಲ, ಶಿವು ಬಗಲಿ, ರಾಜಕುಮಾರ ಸಗಾಯಿ, ಅಶೋಕ ಅಕಲಾದಿ, ಪ್ರಶಾಂತ ಗವಳಿ, ನಾಗೇಶ ಹೆಗಡ್ಯಾಳ, ಪ್ರಶಾಂತ ಲಾಳಸಂಗಿ, ಮಂಜು ದೇವರ, ಶಾಂತು ಕಂಬಾರ, ಭೀಮಾಶಂಕರ ಆಳೂರ, ಶ್ರೀಶೈಲಗೌಡ ಪಾಟೀಲ, ಮಲ್ಲು ವಾಲೀಕಾರ, ಈರಣ್ಣಗೌಡ ಪಾಟೀಲ, ಜಟ್ಟು ಮರಡಿ, ರಮೇಶ ಧರೇನವರ, ಮಹೇಶ ಹೂಗಾರ, ದತ್ತಾ ಬಂಡೇನವರ, ಸೇರಿದಂತೆ ಇನ್ನಿತರ ಪ್ರಮುಖರು ಉಪಸ್ಥಿತರಿದ್ದರು.

## ಚಾಕಲೇಟ್ ಕದ್ದ ಆರೋಪಕ್ಕೆ ಬಾಲಕರಿಗೆ ಥಳಿತ :ಆರೋಪಿ ಬಂಧನ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಚಾಕಲೇಟ್ ಕದ್ದಿದ್ದಾರೆ ಎಂಬ ಆರೋಪಕ್ಕೆ ಇಬ್ಬರು ಬಾಲಕರಿಗೆ ಪೈಪ್‌ನಿಂದ ಅಮಾನುಷವಾಗಿ ಥಳಿಸಿದ ಘಟನೆ ಜಿಲ್ಲೆಯ ಆಲಮೇಲ ತಾಲೂಕಿನ ಮಲಘಾಣ ಗ್ರಾಮದಲ್ಲಿ ನಡೆದಿದೆ. ಘಟನೆಗೆ ಸಂಬಂಧಿಸಿದಂತೆ ಇದೀಗ ಪೊಲೀಸರು ಆರೋಪಿ ಅಂಗಡಿ ಮಾಲೀಕನನ್ನು ಬಂಧಿಸಿದ್ದಾರೆ.

ಮಲಘಾಣ ಗ್ರಾಮದ ಆಶಿಫ್ ಬಡೇಗಾರ ಹಾಗೂ ಮಕತುಮ ಸಾಬ್ ಬಡೇಗಾರ ಎಂಬ 10 ಮತ್ತು 11 ವರ್ಷದ ಬಾಲಕರು ಹಲ್ಲೆಗೊಳಗಾದವರು. ಚಾಕಲೇಟ್ ಕದ್ದಿದ್ದಾರೆ ಎಂದು ಆರೋಪಿಸಿ ಅಂಗಡಿ ಮಾಲೀಕ ಅಶೋಕ ಪತ್ತಾರ ಎಂಬಾತ ಬಾಲಕರಿಬ್ಬರನ್ನು ಅಂಗಡಿಗೆ ಕರೆಸಿ ಪೈಪ್‌ನಿಂದ ಥಳಿಸಿದ್ದಾನೆ ಎನ್ನಲಾಗಿದೆ. ಬಾಲಕರ ಮೇಲೆ ಹಲ್ಲೆ ಮಾಡುತ್ತಿರುವ ದೃಶ್ಯವನ್ನು ಸ್ಥಳದಲ್ಲಿದ್ದವರು ಮೊಬೈಲ್‌ನಲ್ಲಿ ಸೆರೆಹಿಡಿದಿದ್ದು, ಇದೀಗ ಸಾಮಾಜಿಕ ಜಾಲತಾಣದಲ್ಲಿ ವಿಡಿಯೋ ವೈರಲ್ ಆಗಿದೆ. ಮಕ್ಕಳ ಮೇಲೆ ಅಮಾನವೀಯವಾಗಿ ಹಲ್ಲೆ ನಡೆಸಿರುವುದಕ್ಕೆ ಸಾರ್ವಜನಿಕರಿಂದ ತೀವ್ರ ಆಕ್ರೋಶ ವ್ಯಕ್ತವಾಗಿದೆ. ಘಟನೆಗೆ ಸಂಬಂಧಿಸಿದಂತೆ ರಹಿಮಾನ್ ವಾಲೀಕಾರ ಎಂಬುವರು ಆಲಮೇಲ ಪೊಲೀಸ್ ಠಾಣೆಗೆ ದೂರು ನೀಡಿದ್ದು, ದೂರಿನ ಆಧಾರದ ಮೇಲೆ ಪೊಲೀಸರು ಆರೋಪಿ ಅಶೋಕ ಪತ್ತಾರನನ್ನು ಬಂಧಿಸಿದ್ದಾರೆ. ಚಾಕಲೇಟ್ ಕದ್ದಿದ್ದಾರೆ ಎಂಬ ಆರೋಪವಿದ್ದರೂ ಮಕ್ಕಳ ಮೇಲೆ ಈ ರೀತಿಯ ಹಲ್ಲೆ ನಡೆಸಿರುವುದು ಖಂಡನೀಯ ವಾಗಿದ್ದು, ಆರೋಪಿ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ. ಆಲಮೇಲ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿತ್ತು.

## ರೈತರಿಗೆ ಬರ ಪರಿಹಾರ ನೀಡುವಂತೆ ಕೆ.ಆರ್.ಎಸ್. ಆಗ್ರಹ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಜಿಲ್ಲೆಯನ್ನು ಬರಪೀಡಿತ ಜಿಲ್ಲೆಯನ್ನಾಗಿ ಘೋಷಣೆ ಹಾಗೂ ರೈತರು ಹಾಗೂ ಸಾರ್ವಜನಿಕರಿಗೆ ಅಗತ್ಯ ಪರಿಹಾರ ಮತ್ತು ಬರ ಪರಿಹಾರ ಕ್ರಮಗಳನ್ನು ಕೈಗೊಳ್ಳುವಂತೆ ಆಗ್ರಹಿಸಿ ವಿಜಯಪುರ ಜಿಲ್ಲಾಧಿಕಾರಿಗಳ ಮುಖಾಂತರ ಮಾನ್ಯ ಮುಖ್ಯಮಂತ್ರಿಗಳಿಗೆ ಕರ್ನಾಟಕ ರಾಷ್ಟ್ರ ಸಮಿತಿ ವತಿಯಿಂದ ಮನವಿ ಸಲ್ಲಿಸಿ ಆಗ್ರಹಪಡಿಸಲಾಯಿತು.

ವಿಜಯಪುರ ಜಿಲ್ಲೆಯಾದ್ಯಂತ ಪ್ರಸಕ್ತ ವರ್ಷದಲ್ಲಿ ಮಳೆಯ ಕೊರತೆ ಹಾಗೂ ಅಸಮರ್ಪಕ ಮಳೆಯ ಪರಿಣಾಮವಾಗಿ ಕೃಷಿ ಚಟುವಟಿಕೆಗಳು ತೀವ್ರವಾಗಿ ಹದಗೆಟ್ಟಿವೆ. ಜಿಲ್ಲೆಯ ಬಹುತೇಕ ಗ್ರಾಮಗಳಲ್ಲಿ ರೈತರು ಮಳೆಯನ್ನೇ ಅವಲಂಬಿಸಿ ಕೃಷಿ ಮಾಡುತ್ತದ್ದು ಮಳೆಯ ಅಭಾವದಿಂದ ಬಿತ್ತನೆ ಮಾಡಿದ ಬೆಳೆಗಳು ಒಣಗುವ ಪರಿಸ್ಥಿತಿ ನಿರ್ಮಾಣವಾಗಿದೆ. ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ. ಇದರ ಜೊತೆಗೆ, ಜಿಲೆಯ ಅನೇಕ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಜಾನುವಾರುಗಳಿಗೆ ಮೇವಿನ ಕೊರತೆ ಹಾಗೂ ನೀರಿನ ಅಭಾವ ಉಂಟಾಗುವ ಪರಿಸ್ಥಿತಿ ಎದುರಾಗಿದೆ. ಆದ್ದರಿಂದ ವಿಜಯಪುರ ಜಿಲ್ಲೆಯನ್ನು ಬರಪೀಡಿತ ಜಿಲ್ಲೆ ಎಂದು ಘೋಷಿಸಲು ಕ್ರಮ ಕೈಗೊಳ್ಳಬೇಕೆಂದು ಆಗ್ರಹಪಡಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಸಂಘಟನಾ ಕಾರ್ಯದರ್ಶಿ ಶಿವಾನಂದ ಯಡಹಳ್ಳಿ, ದುರ್ಗಪ್ಪ ಬೂದಿಹಾಳ, ಸೀನು ಹಿಪ್ಪರಗಿ, ರಾಜು ಹೊನ್ನುಟಗಿ, ಸುಂಕಪ್ಪ ಕುಂಚಿಕೊರವೆರ, ರಾಕೇಶ ಇಂಗಳಗಿ, ಪ್ರವೀಣ ಕನಸೇ, ರಾಘವೇಂದ್ರ ಛಲವಾದಿ. ವಿಕ್ರಮ್ ವಾಘಮೋರೆ. ಹಮಿದ ಇನಾಮದಾರ, ಗಣಪತಿ ರಾಠೋಡ ಇನ್ನಿತರರು ಇದ್ದರು.

### ವಿಜಯಪುರದಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿದ ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಬಿ.ಪಾಟೀಲ ಭರವಸೆ

## ವಿಜಯಪುರದ ಸಮಗ್ರ ಅಭಿವೃದ್ಧಿ ಪಯಣ ನಿರಂತರ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಉತ್ತಮ ರಸ್ತೆ ನಿರ್ಮಾಣದಿಂದ ನಗರದ ಅಭಿವೃದ್ಧಿಗೆ ವೇಗ ಸಿಗುವುದರ ಜೊತೆಗೆ ಜನರ ಸುಗಮ ಸಂಚಾರಕ್ಕೆ ಮತ್ತಷ್ಟು ಅನುಕೂಲವಾಗಲು ಮಹತ್ವದ ಹೆಜ್ಜೆಯಾಗಿದೆ ಎಂದು ಲೋಕೋಪಯೋಗಿ ಇಲಾಖೆ ಸಚಿವರಾದ ಸತೀಶ ಜಾರಕಿಹೊಳಿ ಹೇಳಿದರು.

ನಗರದ ರಹಮಾನಿಯ ವೃತ್ತದಿಂದ ಕನ್ನಾನ ಫಂಕ್ಷನ್ ಹಾಲ್, ಬಾರಾಕೋಟ ತಾಂಡಾ ಮೂಲಕ ಜುಮನಾಳ, ಖತಿಜಾಪುರ ಕೂಡು ರಸ್ತೆ ನಿರ್ಮಾಣಕ್ಕೆ 5 ಕೋಟಿ ರೂ. ವೆಚ್ಚದಲ್ಲಿ ಹಾಗೂ ಅಥಣಿ ಮುಖ್ಯ ರಸ್ತೆಯಿಂದ ರಾಜಕುಮಾರ ಲೇಔಟ್ ಕೂಡು ರಸ್ತೆ 1.50 ಕೋಟಿ ವೆಚ್ಚದಲ್ಲಿ ಕೈಗೊಳ್ಳುತ್ತಿರುವ ರಸ್ತೆ ಕಾಮಗಾರಿಗಳಿಗೆ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಬಿ.ಪಾಟೀಲ ಅವರೊಂದಿಗೆ ಜಂಟಿಯಾಗಿ ವಿದ್ಯುಕ್ತ ಚಾಲನೆ ನೀಡಿ, ಮಾತನಾಡಿದ ಅವರು, ವಿಜಯಪುರದ ಸಮಗ್ರ ಅಭಿವೃದ್ಧಿಯ ಪಯಣ ನಿರಂತರವಾಗಿರಲಿದೆ ಎಂದರು.

ನಗರದ ರೆಹಮಾನಿಯಾ ವೃತ್ತದಿಂದ ಕನ್ನಾನ್ ಫಂಕ್ಷನ್ ಹಾಲ್ ಹಾಗೂ ಬಾರಾಕೋಟ್ ತಾಂಡಾ ಮೂಲಕ ಜುಮನಾಳ ಹಾಗೂ ಖತಿಜಾಪುರ ಕೂಡು ರಸ್ತೆ ಸುಧಾರಣೆ ಅಂದಾಜು 500 ಲಕ್ಷ ರೂ.ವೆಚ್ಚ ಮಾಡಲಾಗುತ್ತಿದೆ. 3 ಕಿಮೀ. ರಸ್ತೆ ಅಭಿವೃದ್ಧಿಪಡಿಸಲಾಗುವುದು. ಈ ಕಾಮಗಾರಿಯಲ್ಲಿ ಎಂಬ್ಯಾಕ್‌ಮೆಟ್, ಸಬ್ ಗ್ರೇಡ್ (300 ಎಂಎ), ಜಿಎಸ್‌ಬಿ, ಡಬ್ಲ್ಯೂ ಎಂಎಂ, ಡಾಂಬರೀಕರಣ (ಬಿಎಂ ಮತ್ತು ಎಸ್ ಡಿಬಿಸಿ) ಮತ್ತು 8 ಸಿ.ಡಿ. ಕಾಮಗಾರಿಗಳು ಸೇರಿವೆ ಎಂದರು.

ಜಿಲ್ಲೆಯ ತಿಕೋಟಾ ತಾಲೂಕಿನ ನವಸರಪುರ, ತಾಜಪುರ ಕೂಡು ರಸ್ತೆ ಸುಧಾರಣೆಗೆ 150 ಲಕ್ಷ ರೂ. ಬಿಡುಗಡೆಯಾಗಿದೆ. ಈ ಅನುದಾನದಡಿ700 ಮೀ. ರಸ್ತೆ ಡಾಂಬರೀಕರಣ ಹಾಗೂ 185 ಮೀಟರ್ ಕಾಂಕ್ರೀಟ್ ರಸ್ತೆ ಮತ್ತು ಫೂಟ್ ಬ್ರಿಡ್ಜ್ ನಿರ್ಮಿಸಲಾಗುವುದು ಎಂದು ಸಚಿವರು ತಿಳಿಸಿದರು.

ತೊರವಿ ಅತಾಲಟ್ಟಿಯಿಂದ ವಿಜಯಪುರ–ಅಥಣಿ ರಾಷ್ಟ್ರೀಯ ಹೆದ್ದಾರಿ 5488 ಕ್ಕೆ ಸಂಪರ್ಕ ಕಲ್ಪಿಸುವ ಡಾಂಬರ್ ರಸ್ತೆ ಮೇಲ್ಮೈ ಹಾಳಾಗಿದ್ದು, 700 ಮೀ. ಉದ್ದಕ್ಕೂ ಎಸ್ ಡಿಬಿಸಿ ಹಾಗೂ 186 ಮೀ. ಉದ್ದದ ಆಂತರಿಕ ರಸ್ತೆಗೆ ಸಿಸಿ ರಸ್ತೆ ಸೇರಿಸಲಾಗುವುದು ಎಂದರು.

ತಿಕೋಟಾ ತಾಲೂಕಿನ ನವರಸಪುರ ತಾಜಪುರ ಜೋಡು ರಸ್ತೆಯ ಸುಧಾರಣೆ ಮಾಡಲಾಗುತ್ತಿದ್ದು, ವಿಜಯಪುರ ನಗರದ ತೋರವಿ ಅತಾಲಟ್ಟಿಯಿಂದ ವಿಜಯಪುರ–ಅಥಣಿರಾಷ್ಟ್ರೀಯಹೆದ್ದಾರಿ548ಬಿಯನ್ನು ಕಲ್ಪಿಸುವ ರಸ್ತೆಯನ್ನು ಅಭಿವೃದ್ಧಿಪಡಿಸಲಾಗುವುದು. ಇದರಲ್ಲಿ ಕಾಲುಸಂಕ (ಫೂಟ್ ಬ್ರಿಡ್ಜ್) ನಿರ್ಮಾಣ ಸೇರಿಸಲಾಗಿದೆ ಎಂದರಲ್ಲದೆ, ಜೊತೆಗೆ ಆಂತರಿಕ ರಸ್ತೆಗಳ ಡಾಂಬರೀಕರಣ ಮತ್ತು ಸಿಸಿ ರಸ್ತೆ ನಿರ್ಮಾಣದ ಮೂಲಕ ಅಭಿವೃದ್ಧಿಪಡಿಸಲಾಗುತ್ತಿದೆ ಎಂದರು.

ಈ ಯೋಜನೆಗಳಿಂದ ವಿಜಯಪುರ ನಗರ ಹಾಗೂ ಸುತ್ತಮುತ್ತಲಿನ ಗ್ರಾಮೀಣ ಪ್ರದೇಶಗಳ ವಾಹನ ಸವಾರರಿಗೆ ಮತ್ತು ಸಾರ್ವಜನಿಕರಿಗೆ ಸುಗಮ ಸಂಚಾರಕ್ಕೆ ಅನುಕೂಲವಾಗಲಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಬಿ.ಪಾಟೀಲ ತಿಳಿಸಿದರು.

ಈ ಸಂದರ್ಭದಲ್ಲಿ ಶಾಸಕ ವಿಠ್ಠಲ ಕಟಕದೊಂಡ, ಮಾಜಿ ಶಾಸಕ ಪ್ರೊ.ರಾಜು ಆಲಗೂರ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಗಂಗಾಧರ ಸಂಬಣ್ಣಿ, ಲೋಕೋಪಯೋಗಿ ಇಲಾಖೆಯ ಕಾರ್ಯನಿರ್ವಾಹಕ ಅಭಿಯಂತರ ಸಿ.ಎಸ್.ಪೊಲೀಸ್ ಪಾಟೀಲ, ಸಹಾಯಕ ನಿರ್ವಾಹಕ ಅಭಿಯಂತರ ರವಿ ಪವಾರ ಸೇರಿದಂತೆ ಸಾರ್ವಜನಿಕರು ಪಾಲ್ಗೊಂಡಿದ್ದರು.

## ಯಡ್ರಾಮಿ: ಶೌಚಾಲಯ ಸ್ಥಳಕ್ಕಾಗಿ ಸಿಡಿದು ನಿಂತ ನಾರಿಶಕ್ತಿ

■ ಉದಯರಶ್ಮಿ ದಿನಪತ್ರಿಕೆ



ಕಲಬುರ್ಗಿ: ಜಿಲ್ಲೆಯ ಯಡ್ರಾಮಿ ಪಟ್ಟಣದ ಮಹಿಳೆಯರ ಸಾರ್ವಜನಿಕ ಶೌಚಾಲಯಕ್ಕೆ ಮೀಸಲಾದ ಸರ್ಕಾರಿ ಜಾಗದಲ್ಲಿ ನಡೆಯುತ್ತಿರುವ ಅಕ್ರಮ ಆಶ್ರಯ ಕಟ್ಟಡ ನಿರ್ಮಾಣವನ್ನು ತಡೆದು, ಒತ್ತುವರಿ ತೆರವುಗೊಳಿಸಿ, ಸಾರ್ವಜನಿಕ ಆಸ್ತಿಯನ್ನು ರಕ್ಷಿಸುವಂತೆ ಕೋರಿ ಪಟ್ಟಣದ ಮಹಿಳೆಯರು ಹಾಗೂ ನಾಗರಿಕರಿಂದ ಬ್ರಹತ್ ಪ್ರತಿಭಟನೆ ನಡೆಯಿತು.

ಪಟ್ಟಣದ ವ್ಯಾಪ್ತಿಯಲ್ಲಿರುವ ವಾರ್ಡ್ ನಂಬರ್ 3 ರ ಸರ್ಕಾರಿ ಜಾಗವನ್ನು ಬಹು ಕಾಲದಿಂದ ಈ ಭಾಗದ ಬಡ ಮತ್ತು ಸಾಮಾನ್ಯ ವರ್ಗದ ನೂರಾರು ಮಹಿಳೆಯರು ನಿತ್ಯ ಸಾರ್ವಜನಿಕ ಶೌಚಾಲಯದ ಜಾಗವಾಗಿ ಬಳಸುತ್ತಿದ್ದರು. ಆದರೆ ಇತ್ತೀಚೆಗೆ ಕೆಲವು ಖಾಸಗಿ ವ್ಯಕ್ತಿಗಳು ಯಾವುದೇ ಸೂಕ್ತ ಅನುಮತಿ, ಪಟ್ಟಣ ಪಂಚಾಯಿತಿಯ ಪರವಾನಗಿ ಇಲ್ಲದೆ, ಈ ಮಹಿಳಾ ಶೌಚಾಲಯದ ಸರ್ಕಾರಿ ಜಾಗವನ್ನು ಅಕ್ರಮವಾಗಿ ಒತ್ತುವರಿ ಮಾಡಿಕೊಂಡು ಅಲ್ಲಿ ಕಾನೂನು ಬಾಹಿರವಾಗಿ ಆಶ್ರಯ ಯೋಜನೆಯಡಿ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ನಡೆಸುತ್ತಿದ್ದಾರೆ. ಇದನ್ನು ಸ್ಥಳೀಯ ಮಹಿಳೆಯರು ಒಟ್ಟಾಗಿ ವಿರೋಧಿಸಿದಾಗ, ಒತ್ತುವರಿದಾರರು ಮಹಿಳೆಯರಿಗೆ ಬೆದರಿಕೆ ಹಾಕಿದ್ದಾರೆ. ಇದರಿಂದಾಗಿ ಮಹಿಳೆಯರು ನಿತ್ಯ ತೀವ್ರ ಸಂಕಷ್ಟ ಎದುರಿಸುವಂತಾಗಿದೆ. ಈ ಕುರಿತು ನಾವು ಯಡ್ರಾಮಿ ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿಗಳಿಗೆ ಹಾಗೂ ತಹಶೀಲ್ದಾರರಿಗೆ ಲಿಖಿತ ದೂರುಗಳನ್ನು ನೀಡಿ ಕಾಮಗಾರಿ ನಿಲ್ಲಿಸುವಂತೆ ಕೋರಿದ್ದರೂ ಸಹ, ಯಾವುದೇ ಕ್ರಮ ಜರುಗಿಸಿಲ್ಲ. ಆದರಿಂದ ಅನಿವಾರ್ಯವಾಗಿ ಹೋರಾಟದ ಹಾದಿ ಹಿಡಿದಿದ್ದಾಗಿ ಪ್ರತಿಭಟನಾಕಾರರು ತಿಳಿಸಿದರು.

ಆ ಜಾಗದ ಮೂಲ ದಾಖಲೆಗಳು ಮತ್ತು ವಾಸ್ತವ ಸ್ಥಿತಿಯನ್ನು ಪರಿಶೀಲಿಸಿ, ಕೂಡಲೇ ಕಾಮಗಾರಿಯನ್ನು ಸ್ಥಗಿತಗೊಳಿಸಲು ಕಟ್ಟುನಿಟ್ಟಿನ ಆದೇಶ ಹೊರಡಿಸಬೇಕು. ಕಾನೂನು ಕೈಗೆತ್ತಿಕೊಂಡು ಮಹಿಳೆಯರಿಗೆ ಬೆದರಿಕೆ ಹಾಕುತ್ತಿರುವ ವ್ಯಕ್ತಿಗಳ ಮೇಲೆ ಕಾನೂನು ಕ್ರಮ ಜರುಗಿಸಬೇಕೆಂದು ಪ್ರತಿಭಟನಾಕಾರರು ತಹಸೀಲ್ದಾರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕರವೇ ಕಲಬುರ್ಗಿ ಜಿಲ್ಲಾಧ್ಯಕ್ಷ ವಿಶ್ವನಾಥ ಜಿ ಪಾಟೀಲ್, ಜೈ ಕನ್ನಡಿಗರ ಸೇನೆ ತಾಲೂಕಾಧ್ಯ ಭರತ್ ದೊರೆ, ಗಂಗಾಧರ ಕರ್ಕಿಹಳ್ಳಿ, ಬೋರಮ್ಮಗೌಡ್ತಿ ಮಾಳಿ, ಚೆನ್ನಮ್ಮಗೌಡ್ತಿ ಮಾಳಿ, ಭಾಗಮ್ಮ ಚೀಲಾ, ಬಸಮ್ಮ ಸಮತನಳ್ಳಿ, ಯಲ್ಲಮ್ಮ ಚೀಲಾ ಸೇರಿದಂತೆ ಅನೇಕ ಮಹಿಳೆಯರು, ನಾಗರಿಕರು ಇದ್ದರು.

## ಕಲ್ಯಾಣ ಪಥಕ್ಕೆ ಗ್ರಹಣ: ಗಡುವು ಮುಗಿದರೂ ಮುಗಿಯದ ಕಾಮಗಾರಿ



■ ಉದಯರಶ್ಮಿ ದಿನಪತ್ರಿಕೆ

ಅಫಜಲಪುರ: ಕಲ್ಯಾಣ ಕರ್ನಾಟಕ ಭಾಗದ ಗ್ರಾಮೀಣ ಸಂಪರ್ಕ ವ್ಯವಸ್ಥೆಗೆ ಕಾಯಕಲ್ಪ ನೀಡಲು ರೂಪಿಸಲಾದ ಮಹತ್ವಾಕಾಂಕ್ಷೆಯ 'ಕಲ್ಯಾಣ ಪಥ' ಯೋಜನೆ ಅಫಜಲಪುರ ತಾಲೂಕಿನಲ್ಲಿ ಸಂಪೂರ್ಣ ಹಳ್ಳ ಹಿಡಿದಿದೆ. ನಿಗದಿತ ಕಾಲಾವಧಿ ಮುಗಿದರೂ ಕಾಮಗಾರಿ ಮುಕ್ತಾಯವಾಗದೆ ರಸ್ತೆಗಳು ಕೆಸರುಗದ್ದೆಯಾಗಿ ಮಾರ್ಪಟ್ಟಿದ್ದು, ಸಾರ್ವಜನಿಕರ ಹಿಡಿಶಾಪಕ್ಕೆ ಕಾರಣವಾಗಿದೆ.

**ಮಳೆ ಬಂದರೆ ಜಾರುಬಂಡಿ:**

ಕಾಮಗಾರಿ ಆರಂಭವಾಗಿ ತಿಂಗಳುಗಳೇ ಕಳೆದರೂ ಕೇವಲ ಮಣ್ಣು ಮತ್ತು ಜಲ್ಲಿ ಸುರಿದು ಅರ್ಧಕ್ಕೆ ಬಿಡಲಾಗಿದೆ. ಮಳೆಗಾಲ ಆರಂಭವಾಗುತ್ತಿದ್ದಂತೆ ಇಡೀ ರಸ್ತೆ ಜಾರುಬಂಡಿಯಂತಾಗಿದ್ದು, ದ್ವಿಚಕ್ರ ವಾಹನ ಸವಾರರು ದಿನನಿತ್ಯ ಬಿದ್ದು ಕೈಕಾಲು ಮುರಿದುಕೊಳ್ಳುತ್ತಿದ್ದಾರೆ. ತುರ್ತು ಸಂದರ್ಭಗಳಲ್ಲಿ ಆಂಬುಲೆನ್ಸ್ ಕೂಡ ಊರು ಪ್ರವೇಶಿಸಲು ಸಾಧ್ಯವಾಗದ ಸ್ಥಿತಿ ನಿರ್ಮಾಣವಾಗಿದೆ.

ವಿಳಂಬ ನೀತಿ ಅನುಸರಿಸುತ್ತಿರುವ ಗುತ್ತಿಗೆದಾರರನ್ನು ಕಪ್ಪುಪಟ್ಟಿಗೆ (Blacklist) ಸೇರಿಸಬೇಕು. ಕಾಮಗಾರಿ ಪರಿಶೀಲಿಸದೆ ನಿರ್ಲಕ್ಷ್ಯ ವಹಿಸಿರುವ ಅಧಿಕಾರಿಗಳ ವಿರುದ್ಧ ಕಠಿಣ ಶಿಸ್ತುಕ್ರಮ ಜರುಗಿಸಬೇಕು. ಬಾಕಿ ಉಳಿದಿರುವ ರಸ್ತೆ ಡಾಂಬರೀಕರಣವನ್ನು ತಕ್ಷಣವೇ ಪೂರ್ಣಗೊಳಿಸಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

ಜನಪ್ರತಿನಿಧಿಗಳು ಹಾಗೂ ಜಿಲ್ಲಾಡಳಿತ ಇನ್ನಾದರೂ ಎಚ್ಚೆತ್ತುಕೊಂಡು ಅಫಜಲಪುರ ತಾಲೂಕಿನ ರಸ್ತೆಗಳ ದುರವಸ್ಥೆಗೆ ಶಾಶ್ವತ ಪರಿಹಾರ ಕಲ್ಪಿಸುತ್ತದೆಯೇ ಎಂದು ಕಾದುನೋಡಬೇಕಾಗಿದೆ.

### 2024–25ರ ಯೋಜನೆಗಳಿಗೆ ಮುಕ್ತಿ ಇಲ್ಲ



2024–2025ರ ಸಾಲಿನಲ್ಲಿ ಮಂಜೂರಾದ ಬಹುತೇಕ 'ಕಲ್ಯಾಣ ಪಥ' ಕಾಮಗಾರಿಗಳು ಇಂದಿಗೂ ಪೂರ್ಣಗೊಂಡಿಲ್ಲ. ಸರ್ಕಾರ ಕೋಟ್ಯಂತರ ರೂಪಾಯಿ ಅನುದಾನ ನೀಡುತ್ತಿದ್ದರೂ, ಸ್ಥಳೀಯ ಮಟ್ಟದಲ್ಲಿ ಕಾಮಗಾರಿಗೆ ವೇಗ ಸಿಕ್ಕಿಲ್ಲ. ಪತ್ರಿಕೆ ಮತ್ತು ಮಾಧ್ಯಮಗಳಲ್ಲಿ ಎರಡು–ಮೂರು ಬಾರಿ ಸಚಿತ್ರ ವರದಿ ಪ್ರಕಟವಾದರೂ ಸಂಬಂಧಪಟ್ಟ ಎಂಜಿನಿಯರ್‌ಗಳು ಮತ್ತು ಅಧಿಕಾರಿಗಳು ಮಾತ್ರ ಕ್ಯಾರೇ ಎನ್ನುತ್ತಿಲ್ಲ.

### 'ನಿರ್ವಹಣಾ ಅನುದಾನ' ನುಂಗುವ ಹುನ್ನಾರವೇ?

ನಿಯಮಗಳ ಪ್ರಕಾರ ರಸ್ತೆ ನಿರ್ಮಾಣದ ಬಳಿಕ ಮುಂದಿನ 5 ವರ್ಷಗಳ ಕಾಲ ಗುತ್ತಿಗೆದಾರರೇ ರಸ್ತೆ ನಿರ್ವಹಣೆ (ಆಐಕ – ಆಜಜಿಜಭಿಣ ಋಚಿಟಿಛುಟುಣಥಿ ಕಜಡಿಡಿಂಜ) ಮಾಡಬೇಕಿರುತ್ತದೆ. ಆದರೆ, ಕಾಮಗಾರಿಯನ್ನೇ ಉದ್ದೇಶಪೂರ್ವಕವಾಗಿ ವರ್ಷಗಟ್ಟಲೆ ಎಳೆದು ತಡವಾಗಿ ಮುಗಿಸಿದರೆ, ಮೊದಲ ವರ್ಷದ ನಿರ್ವಹಣಾ ವೆಚ್ಚವನ್ನು ಸುಲಭವಾಗಿ ಜೇಬಿಗಿಳಿಸಿಕೊಳ್ಳಬಹುದು ಎಂಬ ಲೆಕ್ಕಾಚಾರ ಇದರ ಹಿಂದಿದೆಯೇ ಎಂಬ ಬಲವಾದ ಅನುಮಾನ ಸಾರ್ವಜನಿಕರಲ್ಲಿ ಮೂಡಿದೆ.

### ಇಂಡಿ ತಾಲೂಕಿನ ಸಾವಳಸಂಗದಲ್ಲಿ ಜ್ಞಾನಯೋಗಿ ಶ್ರೀ ಸಿದ್ಧೇಶ್ವರ ಸ್ವಾಮೀಜಿ ವೃಕ್ಷೋದ್ಯಾನ ಲೋಕಾರ್ಪಣೆ । ಸಚಿವ ರಾಮಲಿಂಗಾರೆಡ್ಡಿ ಭರವಸೆ

# ಟ್ರೀ ಪಾರ್ಕ್ & ಕೃಷ್ಣಮೃಗ ಮೀಸಲು ಪ್ರದೇಶ ಅಭಿವೃದ್ಧಿಗೆ ಬದ್ಧ

■ ಉದಯರಶ್ಮಿ ದಿನಪತ್ರಿಕೆ




ಇಂಡಿ: ಇಂಡಿ ಕ್ಷೇತ್ರದ ಶಾಸಕ ಯಶವಂತ್ರಾಯಗೌಡರು ನಮ್ಮ ಇಲಾಖೆಗೆ ಸಂಬಂಧಿಸಿದಂತೆ ಅಭಿವೃದ್ಧಿಯ ಯಾವುದೇ ಕೆಲಸ ತಂದರೂ ಅದನ್ನು ಕೂಡಲೆ ಮಾಡಿಕೊಡುವುದಾಗಿ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರಾದ ರಾಮಲಿಂಗಾರೆಡ್ಡಿ ಅವರು ಹೇಳಿದರು.

ವಿಜಯಪುರದ ಸಾಮಾಜಿಕ ಅರಣ್ಯ ವಿಭಾಗ ಹಾಗೂ ಇಂಡಿ ಸಾಮಾಜಿಕ ಅರಣ್ಯ ವಲಯದ ಜಂಟಿ ಸಹಯೋಗದಲ್ಲಿ ಇಂಡಿ ತಾಲೂಕಿನ ಸಾವಳಸಂಗದಲ್ಲಿ ನಿರ್ಮಿಸಲಾಗಿರುವ ಜ್ಞಾನಯೋಗಿ ಶ್ರೀ ಸಿದ್ದೇಶ್ವರ ಸ್ವಾಮೀಜಿ ವೃಕ್ಷೋದ್ಯಾನವನ್ನು ಭಾನುವಾರ ವಿದ್ಯುಕ್ತವಾಗಿ ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು.

ವಿಜಯಪೂರ ಜಿಲ್ಲೆಯಲ್ಲಿ ಕೇವಲ 2 ಪ್ರತಿಶತದಷ್ಟು ಮಾತ್ರ ಅರಣ್ಯೀಕರಣವಿದೆ. ಈ ಭಾಗದಲ್ಲಿ ಇನ್ನೂ ಅರಣ್ಯ ಪ್ರದೇಶ ಹೆಚ್ಚಾಗಬೇಕು. ಅಂದಾಗ ಮಾತ್ರ ಇಲ್ಲಿ ಉತ್ತಮ ಮಳೆ, ಬೆಳೆ ಬರಲು ಸಾಧ್ಯವಾಗುತ್ತದೆ. ಮತ್ತು ಜನರು ಆರೋಗ್ಯವಂತರಾಗಿ ಬಾಳಲು ಅನುಕೂಲವಾಗುತ್ತದೆ ಎಂದರು.

ಸಾವಳಸಂಗ ಭಾಗದಲ್ಲಿ ಅರಣ್ಯ ಇಲಾಖೆಯವರು ಹಸಿರೀಕರಣ ಹೆಚ್ಚಿಸಲು ಕೈಗೊಂಡಿರುವ ಈ ಕಾರ್ಯವನ್ನು ಪ್ರಶಂಸಿಸಿದ ಸಚಿವರು, ಕೇವಲ 2.50 ಕೋಟಿ ರೂಪಾಯಿ ವೆಚ್ಚದಲ್ಲಿ ಇಷ್ಟೊಂದು ಅದ್ಬುತವಾಗಿ ವೃಕ್ಷೋದ್ಯಾನವನ್ನು ಅಭಿವೃದ್ಧಿಪಡಿಸಲಾಗಿದ್ದು, ಮುಂದಿನ ದಿನಗಳಲ್ಲಿ ಇಂಡಿ ನಗರದಲ್ಲಿ ಟ್ರೀ ಪಾರ್ಕ್ ಹಾಗೂ ಕೃಷ್ಣಮೃಗ ಮೀಸಲು ಪ್ರದೇಶವನ್ನು ಅಭಿವೃದ್ಧಿಪಡಿಸಲು ಅರಣ್ಯ ಇಲಾಖೆಯಿಂದ ಅಗತ್ಯವಿರುವ ಎಲ್ಲಾ ನೆರವು ನೀಡಲಾಗುವುದು ಎಂದು ಭರವಸೆ ನೀಡಿದರು.

ಈ ವೃಕ್ಷೋದ್ಯಾನಕ್ಕೆ ನಡೆದಾಡುವ ದೇವರು ಜ್ಞಾನಯೋಗಿ ಶ್ರೀ ಸಿದ್ದೇಶ್ವರ ಸ್ವಾಮೀಜಿ ಅವರ ಹೆಸರನ್ನಿರಿಸಿರುವುದು ಶ್ರೇಷ್ಠ ಎಂದ ಅವರು, ಪ್ರತಿಯೊಬ್ಬರ ಹೃದಯದಲ್ಲೂ ಸರಳತೆ, ಜ್ಞಾನ ಹಾಗೂ ಪರಿಸರ ಪ್ರೀತಿಯನ್ನು ಮೂಡಿಸುವಂತಿದೆ. ಅವರ ದಿವ್ಯಸಾನ್ನಿಧ್ಯ ಮತ್ತು ಪ್ರೇರಣೆಯಿಂದ ನಿರ್ಮಾಣಗೊಂಡಿರುವ ಈ ಆಕರ್ಷಕ ತಾಣವು ಜನರಲ್ಲಿ ಪ್ರಕೃತಿಯ ಬಗ್ಗೆ ಹೆಚ್ಚಿನ ಕಾಳಜಿ ವಹಿಸುವಂತೆ ಮಾಡುತ್ತದೆ. ಇಲ್ಲಿಗೆ ಆಗಮಿಸುವ ಪ್ರತಿಯೊಬ್ಬ ನಾಗರಿಕರು ಸಸಿ ನೆಡುವ ಮೂಲಕ ಇದನ್ನು ತಮ್ಮ ಸ್ವಂತ ಆಸ್ತಿಯಂತೆ ಸಂರಕ್ಷಿಸಬೇಕು ಎಂದು ಕರೆ ನೀಡಿದರು.

ಉತ್ತಮ ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡಿರುವ ಶಾಸಕರ ಶ್ರಮವನ್ನು ಇದೇ ವೇಳೆ ಕ್ಷೇತ್ರದಲ್ಲಿ ಕೊಂಡಾಡಿದ ಸಚಿವರು, ರೇವಣಸಿದ್ದೇಶ್ವರ ಏತ ನೀರಾವರಿ ಯೋಜನೆಯಿಂದ ಈ ಭಾಗದ ಜನರಿಗೆ ಮತ್ತು ಕೃಷಿಗೆ ಬಹಳಷ್ಟು ಅನುಕೂಲವಾಗಲಿದೆ ಎಂದರು.

ಇಂಡಿ ಶಾಸಕ ಯಶವಂತರಾಯಗೌಡ ಪಾಟೀಲ ಅವರು ಅಧ್ಯಕ್ಷತೆ ವಹಿಸಿ, ನಿಸರ್ಗ ಪ್ರಿಯ ಹಾಗೂ ಸರಳ ಬದುಕಿನ ಚಿಂತಕರಾಗಿದ್ದ ಸಿದ್ದೇಶ್ವರ ಶ್ರೀಗಳ ತತ್ವಗಳು ಮುಂದಿನ ಜನಾಂಗಕ್ಕೆ ಸ್ವಚ್ಛತೆ, ಸರಳತೆ ಹಾಗೂ ನಿಷ್ಠೆಯ ಹಾದಿ ತೋರಿಸಲಿವೆ ಎಂದರು.

ಆಲಮಟ್ಟಿ ಜಲಾಶಯಕ್ಕಾಗಿ ಭೂಮಿ ತ್ಯಾಗ ಮಾಡಿದ ಪುಣ್ಯಾತ್ಮರ ಬಲದಿಂದಲೇ ಇಂದು ಈ ಭಾಗ ಉಸಿರಾಡುತ್ತಿದೆ ಎಂದು ಸ್ಮರಿಸಿದ ಶಾಸಕರು, ಬರದಿಂದ ತತ್ತರಿಸಿದ್ದ ಈ ಕ್ಷೇತ್ರದಲ್ಲಿ ನೀರಿನ ಅಭಾವ ನೀಗಿಸಲು ರೂಪಿಸಲಾದ ನೀರಾವರಿ ಯೋಜನೆಗಳಿವೆ ಎಂದು ವಿವಿಧ ಯೋಜನೆಗಳ ಪ್ರಗತಿಯನ್ನು ಹಂಚಿಕೊಂಡರು.

ಕ್ಷೇತ್ರದಲ್ಲಿ ಈಗಾಗಲೇ 19 ಕೆರೆಗಳನ್ನು ತುಂಬಿಸಿದ್ದರಿಂದ ಅಂತರ್ಜಲ ಮಟ್ಟ ಹೆಚ್ಚಳಗೊಂಡಿದೆ. ಆ ಮೂಲಕ ಈ ಭಾಗದ ರೈತರಿಗೆ ಅನುಕೂಲವಾಗಿದೆ ಎಂದರು.

ಮಳೆಯಾಗದೇ ಬೆಳೆ ಕಳೆದುಕೊಂಡಿರುವ ರೈತರ ಹಿತ ಕಾಯಲು ತಾಲೂಕನ್ನು ಬರಪೀಡಿತ ಎಂದು ಘೋಷಿಸುವಂತೆ ಸರ್ಕಾರಕ್ಕೆ ಮನವಿ ಮಾಡಲಾಗಿದ್ದು, ಸಂಕಷ್ಟದಲ್ಲಿರುವ ಪ್ರತಿಯೊಬ್ಬ ರೈತರಿಗೆ ಶೀಘ್ರವೇ ಪರಿಹಾರ ದೊರಕಿಸುವ ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಆಶ್ವಾಸನೆ ನೀಡಿದರು. ಹಾಗೆಯೇ ಇಂಡಿ ಭಾಗದ ಕುಡಿಯುವ ನೀರಿನ ಸಮಸ್ಯೆಗೆ ಈಗಾಗಲೇ ಶಾಶ್ವತ ಪರಿಹಾರ ಕಂಡುಕೊಳ್ಳಲಾಗಿದೆ ಎಂದು ತಿಳಿಸಿದರು.

ಅರಣ್ಯ ಇಲಾಖೆಯ ಸತತ ಪರಿಶ್ರಮ ಹಾಗೂ ತಾವು ನೀಡಿದ 90 ಲಕ್ಷ ರೂಪಾಯಿ ಅನುದಾನ ಸೇರಿದಂತೆ ಅನೇಕರ ಸಹಕಾರದಿಂದ ಈ ವೃಕ್ಷೋದ್ಯಾನ ರೂಪುಗೊಂಡಿದೆ. ಇದನ್ನು ಪ್ರತಿಯೊಬ್ಬರೂ ತಮ್ಮ ಸ್ವಂತ ಆಸ್ತಿಯಂತೆ ಭಾವಿಸಿ ಸ್ವಚ್ಛತೆ ಕಾಪಾಡಿಕೊಳ್ಳಬೇಕು. ಜಿಲ್ಲೆಯಲ್ಲಿ ಅರಣ್ಯ ಪ್ರದೇಶ ಹೆಚ್ಚಿಸಲು ಸಾರ್ವಜನಿಕರು ಸಸಿ ನೆಡುವ ಮೂಲಕ ಹಸಿರೀಕರಣ ಬೆಳವಣಿಗೆಗೆ ಪೂರಕವಾಗಿ ಪ್ರೇರಣೆ ನೀಡಬೇಕು ಎಂದರು.

ನಡೆದಾಡುವ ದೇವರು ಶ್ರೀ ಸಿದ್ದೇಶ್ವರ ಸ್ವಾಮೀಜಿ ನಿಸರ್ಗದಲ್ಲಿ ಬೆರೆತಿದ್ದಾರೆ. ಸ್ವಾಮೀಜಿಯವರು ನಿಸರ್ಗ ಪ್ರಿಯರಾಗಿದ್ದರಿಂದ ಅವರ ಹೆಸರನ್ನೇ ಈ ವೃಕ್ಷೋದ್ಯಾನಕ್ಕೆ ನಾಮಕರಣ ಮಾಡಿದ್ದೇವೆ ಎಂದ ಅವರು, ಅಂತಹ ಮಹಾ ಮೇಧಾವಿಗಳ ಪವಿತ್ರವಾದ ಹೃದಯಕ್ಕೆ ಈ ವೃಕ್ಷೋದ್ಯಾನ ಅರ್ಪಿಸಲಾಗುತ್ತಿದೆ ಎಂದರು.

ಸಿದ್ದೇಶ್ವರ ಸ್ವಾಮೀಜಿ ಅವರ ಆಶಯದಂತೆ ಈ ವೃಕ್ಷೋದ್ಯಾನ ನಿರ್ಮಾಣವಾಗಿದೆ. ಸರ್ಕಾರದ ಜೊತೆ ನಾಗರಿಕರ ಸಹಭಾಗಿತ್ವ ಬಹು ಮುಖ್ಯವಾಗಿದೆ. ಇಲ್ಲಿ ಸ್ವಚ್ಛತೆ ಕಾಪಾಡಿಕೊಳ್ಳಬೇಕು. ಈ ಪ್ರದೇಶ ಸ್ವಚ್ಛವಾಗಿಡೋಣ. ನಿಸರ್ಗವನ್ನು ಸಂರಕ್ಷಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದರು. ನಮ್ಮ ಜಿಲ್ಲೆಯ ಅರಣ್ಯ ಪ್ರದೇಶ ಹೆಚ್ಚಿಗಾಗುವಲ್ಲಿ ಸಸಿ ನೆಡಿ, ಅರಣ್ಯೀಕರಣ ಬೆಳೆಸುವ ಪ್ರಯತ್ನ ಮಾಡುವ ಮೂಲಕ ಮುಂದಿನ ದಿನಗಳಲ್ಲಿ ಹಸರೀಕರಣವಾಗುವ ನಿಟ್ಟಿನಲ್ಲಿ ಪ್ರಯತ್ನ ಮಾಡೋಣ ಎಂದರು.

ಭೀಮಾ ಸಿರಿಯಾಗಿಸುವೆ:

ತಮ್ಮ ಶ್ರಮದ ಫಲವಾಗಿ ಲಿಂಬೆ ಅಭಿವೃದ್ಧಿ ಮಂಡಳಿ ಸ್ಥಾಪನೆಯಾಗಿ ಜಿಐ ಟ್ಯಾಗ್ ದೊರೆತಿದ್ದರಿಂದ ಇಂಡಿಯ ಲಿಂಬೆ ಇಂದು ವಿಶ್ವಮಟ್ಟದಲ್ಲಿ ಗುರುತಿಸಿಕೊಂಡಿದೆ. ಭೀಮಾ ತೀರವನ್ನು ಭೀಮಾ ಸಿರಿಯಾಗಿಸುವ ನಿಟ್ಟಿನಲ್ಲಿ ಕೆಲಸ ಸಾಗುತ್ತಿದ್ದು, ಸರ್ಕಾರದ ಜೊತೆಗೆ ನಾಗರಿಕರ ಸಹಭಾಗಿತ್ವ ಅತ್ಯಗತ್ಯವಾಗಿದೆ ಎಂದರು. ಕ್ಷೇತ್ರ ಅಭಿವೃದ್ಧಿಪಡಿಸಲು ಹಾಗೂ ಈ ಭಾಗದ ರೈತರ ಸಂಕಟಗಳಿಗೆ ಸ್ಪಂದಿಸಲು ತಾವು ಬದ್ಧವಾಗಿದ್ದು, ಮುಖ್ಯಮಂತ್ರಿಗಳು ಕೂಡ ಈ ಭಾಗದ ಸರ್ವಾಂಗೀಣ ಅಭಿವೃದ್ಧಿಗೆ ಭರವಸೆ ನೀಡಿದ್ದಾರೆ ಎಂದು ಶಾಸಕರು ಹೇಳಿದರು.

ಜ್ಞಾನಯೋಗಾಶ್ರಮದ ಅಧ್ಯಕ್ಷ ಗುರುಗಳಾದ ಶ್ರೀ ಬಸವಲಿಂಗ ಮಹಾಸ್ವಾಮಿಗಳು ಹಾಗೂ ಶ್ರೀ ಅಮೃತನಾಂದ ಮಹಾಸ್ವಾಮಿಜಿ ಅವರು ಸಾನಿಧ್ಯ ವಹಿಸಿ, ಆಶೀರ್ವಚನ ನೀಡಿದರು.

ಬೆಳಗಾವಿ ವೃತ್ತದ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮಂಜುನಾಥ ಚೌಹಾಣ, ವೈ.ವಿ.ಪಿ ಫೌಂಡೇಶನ್ ಗೌರವಾಧ್ಯಕ್ಷೆ ಶಿವಲೀಲಾ ಪಾಟೀಲ ಮಾತನಾಡಿದರು.

ವೃಕ್ಷೋಧ್ಯಾನ ನಿರ್ಮಾಣದಲ್ಲಿ ಪ್ರಮುಖ ಪಾತ್ರ ವಹಿಸಿದ ಸಾಮಾಜಿಕ ವಲಯ ಅರಣ್ಯಾಧಿಕಾರಿ ಮಂಜುನಾಥ ಧೂಳೆ ಅವರಿಗೆ ಸಚಿವರು, ಶಾಸಕರು ಸತ್ಕರಿಸಿ ಗೌರವಿಸಿದರು.

ಕಾರ್ಯಕ್ರಮದಲ್ಲಿ ಅಮೋಘ ಸಿದ್ದೇಶ್ವರ ಸ್ವಾಮೀಜಿ, ಕರ್ನಾಟಕ ರಾಜ್ಯ ಲಿಂಬೆ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರಾದ ಬಿ.ಎಸ್. ಕವಲಗಿ, ತಾಲೂಕಾ ಗ್ಯಾರಂಟಿ ಯೋಜನೆ ಅಧ್ಯಕ್ಷರಾದ ಪ್ರಶಾಂತ ಕಾಳೆ, ಇಂಡಿ ಉಪವಿಭಾಗಾಧಿಕಾರಿಗಳಾದ ಚಿದಾನಂದ ಗುರುಸ್ವಾಮಿ, ತಹಸೀಲ್ದಾರ ನಾಗೇಂದ್ರ ಕೋಳಶೆಟ್ಟಿ, ಡಿಸಿಎಫ್ ಬಾಗಲಕೋಟೆ ವಲಯ ಅರಣ್ಯಾಧಿಕಾರಿಗಳಾದ ಸ್ವಪ್ನಿಲ್, ಡಿವೈಎಸ್‌ಪಿ ಸದಾಶಿವ ಕಟ್ಟಿಮನಿ, ಇಓ ಮಹಾದೇವಪ್ಪ ಏವೂರ, ಸಾಮಾಜಿಕ ಅರಣ್ಯ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿಗಳಾದ ಮಲ್ಲಿನಾಥ ಕುಸನಾಳ, ಆರ್ ಎಫ್ ಒ ಶಿವರುದ್ರಪ್ಪ ಕಬಾಡಗಿ, ಎಂ. ಆರ್. ಪಾಟೀಲ ಮತ್ತು ವಿವಿಧ ಮಠಾಧೀಶರು, ಪರಿಸರ ಪ್ರೇಮಿಗಳು, ಶಾಲಾ-ಕಾಲೇಜ್ ವಿದ್ಯಾರ್ಥಿಗಳು ಸೇರಿದಂತೆ ಸಾರ್ವಜನಿಕರು ಉಪಸ್ಥಿತರಿದ್ದರು.



## ಕ್ರೀಡೆ ಶಿಸ್ತು, ಆರೋಗ್ಯ, ಆತ್ಮವಿಶ್ವಾಸ ಬೆಳೆಸುವ ಸಾಧನ :ಪ್ರಕಾಶ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಪ್ರತಿಯೊಬ್ಬ ಕ್ರೀಡಾಪಟು ಕ್ರೀಡಾ ಸ್ಫೂರ್ತಿ, ಶಿಸ್ತು ಹಾಗೂ ಆತ್ಮವಿಶ್ವಾಸದಿಂದ ಕ್ರೀಡೆಯಲ್ಲಿ ಭಾಗವಹಿಸಿ ಕ್ರೀಡಾಕೂಟವನ್ನು ಯಶಸ್ವಿಗೊಳಿಸಬೇಕು ಎಂದು ನಗರ ವಲಯ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಶಿಕ್ಷಣ ಸಂಯೋಜಕ ಪ್ರಕಾಶ ನಾಲತವಾಡ ಹೇಳಿದರು.

ನಗರದ ಡಾ.ಬಿ.ಆರ್. ಅಂಬೇಡ್ಕರ್ ಕ್ರೀಡಾಂಗಣದಲ್ಲಿ ರವಿವಾರ ನಡೆದ ಸಿದ್ದೇಶ್ವರ ಬಿ ವಲಯದ ಪ್ರೌಢಶಾಲೆಗಳ ಪಂದ್ಯಾವಳಿಯ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು, ಕ್ರೀಡೆ ವಿದ್ಯಾರ್ಥಿಗಳ ದೈಹಿಕ ಸಾಮರ್ಥ್ಯವನ್ನು ಹೆಚ್ಚಿಸುವುದರ ಜೊತೆಗೆ ಶಿಸ್ತು, ಸಮಯಪ್ರಜ್ಞೆ, ನಾಯಕತ್ವ ಗುಣ ಹಾಗೂ ಆತ್ಮವಿಶ್ವಾಸ ಬೆಳೆಸುತ್ತದೆ. ಸೋಲು ಗೆಲುವನ್ನು ಸಮಾನ ಮನಸ್ಸಿನಿಂದ ಸ್ವೀಕರಿಸಿ, ಉತ್ತಮ ಪ್ರದರ್ಶನ ನೀಡುವ ಮೂಲಕ ಕ್ರೀಡಾ ಕ್ಷೇತ್ರದಲ್ಲಿ ಸಾಧನೆ ಮಾಡಬೇಕು ಎಂದು ಕರೆ ನೀಡಿದರು. ಪಂದ್ಯಾವಳಿ ಉದ್ಘಾಟಿಸಿದ ಶಿಕ್ಷಕರ ಸಂಘದ ನಗರ ಘಟಕದ ಅಧ್ಯಕ್ಷ ಸಯ್ಯದಜುಬೇರ ಕೆರೂರ ಮಾತನಾಡಿ, ಮಕ್ಕಳು ಮೊಬೈಲ್ ದಾಸರಾಗದೆ ಕ್ರೀಡೆಯಲ್ಲಿ ಹೆಚ್ಚು ತೊಡಗಿಸಿಕೊಳ್ಳಬೇಕು. ದೈಹಿಕ ಶ್ರಮದ ಮೂಲಕ ಆರೋಗ್ಯ ಕಾಪಾಡಿಕೊಂಡು, ಕ್ರೀಡೆಯಿಂದ ಮಾನಸಿಕ ನೆಮ್ಮದಿ ಹಾಗೂ ಉತ್ಸಾಹ ಪಡೆಯಬೇಕು ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಶಿಕ್ಷಕರ ಸಂಘದ ಸಂಘಟನಾ ಕಾರ್ಯದರ್ಶಿ ಕಬೂಲ್ ಕೊಕಟನೂರ, ನಗರ ಘಟಕದ ಕಾರ್ಯದರ್ಶಿ ಮಂಜುನಾಥ ಅರೆಶಂಕರ, ಕ್ಷೇತ್ರ ಸಂಪನ್ಮೂಲ ವ್ಯಕ್ತಿ ಸವಿತಾ ಗೋಡೆಕರ, ಅಭಿನವ ಪ್ರೌಢಶಾಲೆಯ ಮುಖ್ಯಸ್ಥ ಮೋಹನ ದಳವಾಯಿ, ಸಿಆರ್‌ಪಿಗಳಾದ ಸವಿತಾ ಧನಗೊಂಡ, ಬಿ.ಎ. ಬಿರಾದಾರ ಸೇರಿದಂತೆ ಶಿಕ್ಷಕರು, ಅಧಿಕಾರಿಗಳು ಹಾಗೂ ಕ್ರೀಡಾಪಟುಗಳು ಭಾಗವಹಿಸಿದ್ದರು. ವಿಜೇತರಿಗೆ ಪ್ರಶಸ್ತಿ ಪತ್ರ ಹಾಗೂ ಕಪ್ ವಿತರಿಸಲಾಯಿತು.



## ಕ್ರೀಡೆ: ಆರ್.ಡಿ.ಪಾಟೀಲ ಕಾಲೇಜು ವಿದ್ಯಾರ್ಥಿಗಳ ಸಾಧನೆ

■ ಉದಯರಶ್ಮಿ ದಿನಪತ್ರಿಕೆ


ಸಿಂದಗಿ: ತಾಲೂಕಿನ ಚಾಂದಕವಟೆಯ ಎಸ್.ಬಿ.ಬಿ.ಕಂಠಿಗೊಂಡಪದವಿಪೂರ್ವಕಾಲೇಜಿನಲ್ಲಿ 2026-27ನೆಯ ಸಾಲಿನ ಸಿಂದಗಿ, ದೇವರಹಿಪ್ಪರಗಿ ಹಾಗೂ ಆಲಮೇಲ ತಾಲೂಕುಗಳ ಪದವಿ ಪೂರ್ವ ಕಾಲೇಜುಗಳ ಗುಂಪು ಕ್ರೀಡಾಕೂಟದಲ್ಲಿ ಬಾಲಕರ ಖೋ-ಖೋ ಪ್ರಥಮ ಸ್ಥಾನ, ಬಾಲಕಿಯರ ಖೋ-ಖೋ ಪ್ರಥಮ ಸ್ಥಾನ, ಬಾಲಕಿಯರ ವಾಲಿಬಾಲ್ ಪ್ರಥಮ ಸ್ಥಾನ, ಬಾಲಕರ ಕಬಡ್ಡಿ ದ್ವಿತೀಯ ಸ್ಥಾನ, ಬಾಲಕಿಯರ ಕಬಡ್ಡಿ ದ್ವಿತೀಯ ಸ್ಥಾನ ಸೇರಿದಂತೆ ವಿವಿಧ ಪಂದ್ಯಾವಳಿಗಳಲ್ಲಿ ವಿಜಯ ಶಾಲಿಯಾದ ಕಾಲೇಜಿನ ಸುಮಾರು 44ವಿದ್ಯಾರ್ಥಿಗಳು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ವಿದ್ಯಾರ್ಥಿಗಳ ಈ ಸಾಧನೆಗೆ ಹಾಗೂ ಮಾರ್ಗದರ್ಶನ ಮಾಡಿದ ದೈಹಿಕ ಉಪನ್ಯಾಸಕ ಗವಿಸಿದ್ದಪ್ಪ ಆನೆಗುಂದಿ ಅವರಿಗೆ ಸಂಸ್ಥೆಯ ಅಧ್ಯಕ್ಷರಾದ ಡಾ.ಪ್ರಭುಸಾರಂಗದೇವ ಶಿವಾಚಾರ್ಯರು, ಉತ್ತರಾಧಿಕಾರಿಗಳಾದ ಡಾ.ವಿಶ್ವಪ್ರಭುದೇವ ಶಿವಾಚಾರ್ಯರು, ಕಾಲೇಜಿನ ಆಡಳಿತ ಮಂಡಳಿ ಸದಸ್ಯರು, ಪ್ರಾಚಾರ್ಯ ಭೀಮನಗೌಡ ಸಿಂಗನಳ್ಳಿ, ಬೋಧಕ, ಬೋಧಕೇತರ ಸಿಬ್ಬಂದಿ ಅಭಿನಂದನೆ ಸಲ್ಲಿಸಿ ಹರ್ಷವ್ಯಕ್ತಪಡಿಸಿ, ಗುಂಪು ಕ್ರೀಡಾಕೂಟದಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಕಾಲೇಜಿನ ಪರವಾಗಿ ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಡಾ.ರವಿ ಗೋಲಾ, ಪಿ.ವಿ.ಮಹಾಲಿನಮಠ,ಡಾ.ಶರಣಬಸವಜೋಗೂರ, ಎಸ್.ಎಚ್.ಜಾಧವ ಎಸ್.ಆರ್.ಬೂದಿಹಾಳ, ಎನ್.ಬಿ.ಪೂಜಾರಿ, ಪ್ರಸನ್ನ ಜೋಗೂರ, ಸುನಿಲ್ ಪಾಟೀಲ, ರಾಹುಲ ನಾರಾಯಣಕರ, ಉದಯ, ಚಂದ್ರು, ರೋಹಿತ್ ಶುಳ್ಳಿ, ದೊಡ್ಡಯ್ಯ, ಅರುಣಾ, ವಿಜಯಲಕ್ಷ್ಮಿ ಕನ್ನೊಳ್ಳಿ ಸೇರಿದಂತೆ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು.

# ಸರ್ಕಾರದಿಂದ ಪರೋಕ್ಷವಾಗಿ ಇಂಗ್ಲಿಷ್ ಭಾಷೆ ಕಲಿಕೆಗೆ ಪ್ರೋತ್ಸಾಹ

■ ಉದಯರಶ್ಮಿ ದಿನಪತ್ರಿಕೆ

**ಗುರುಪೂರ್ಣಿಮಾ ಮಹೋತ್ಸವ, ಕನ್ನಡ ಉಳಿಸಿ ಉಪನ್ಯಾಸ ಮಾಲಿಕೆ & ಜಿಲ್ಲಾ ಯುವಗೋಷ್ಠಿ ಕಾರ್ಯಕ್ರಮದಲ್ಲಿ ಮಯೂರ ತಿಳಗೂಳಕರ ಅಭಿಮತ**



ವಿಜಯಪುರ: ಸರ್ಕಾರ ದ್ವಿಭಾಷಾ ನೀತಿಯಿಂದ ಕನ್ನಡವನ್ನು ಪರೋಕ್ಷವಾಗಿ ನಿರ್ಲಕ್ಷ್ಯಿಸಿ ಇಂಗ್ಲಿಷ ಭಾಷೆ ಕಲಿಕೆಗೆ ಪ್ರೋತ್ಸಾಹ ಕೊಡುತ್ತಿದೆ ಎಂದು ಮಯೂರ ತಿಳಗೂಳಕರ ಹೇಳಿದರು.

ನಗರದ ದರ್ಬಾರ್ ಸಭಾಭವನದಲ್ಲಿ ರವಿವಾರ ದಿನಾಂಕ 30 ರಂದು ನಡೆದ ಗುರುಪೂರ್ಣಿಮಾ ಮಹೋತ್ಸವ ಮತ್ತು ಕನ್ನಡ ಉಳಿಸಿ ಉಪನ್ಯಾಸ ಮಾಲಿಕೆ ಹಾಗೂ ಜಿಲ್ಲಾ ಯುವಗೋಷ್ಠಿ ಕಾರ್ಯಕ್ರಮದಲ್ಲಿ ಅವರು ಮಾತಾಡಿ ದ್ವಿಭಾಷಾ ನೀತಿಯಿಂದಾಗಿ ಕನ್ನಡ ಭಾಷೆಯಮೇಲಾಗುವ ಪರಿಣಾಮ ಕುರಿತು ವಿವರಿಸಿದರು.

"ಭಾರತೀಯ ಸಾಹಿತಿಗಳ ಸಾಹಿತ್ಯ ಸೇರಿ ಒಂದು ತೂಕವಾದರೆ ವೇದವ್ಯಾಸರ ಸಾಹಿತ್ಯ ಮತ್ತೊಂದು ತೂಕವೆಂದು" ಆನಂದ ಗೋಡಸೆ ವೇದವ್ಯಾಸ ಸಾಹಿತ್ಯ ಕುರಿತು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಯುವಗೋಷ್ಠಿ ಸ್ಪರ್ಧೆಯು ಜರುಗಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಿವೇಕ ಕುಲಕರ್ಣಿ ವಹಿಸಿದ್ದರು. ನಿರೂಪಣೆ - ರಾಹುಲ್ ಮರಳಿ , ಪ್ರಾರ್ಥನೆ ಸೌಮ್ಯ ಕುಲಕರ್ಣಿ , ವಂದನೆ ಅನಿಲ ಬಳುಂಡಗಿ ನಿರ್ವಹಣೆ ಮಾಡಿದರು. ಕಾರ್ಯಕ್ರಮದಲ್ಲಿ ನಾರಾಯಣ ಬಾಬಾನಗರ, ಸುಕಾಂತ ಕುಲಕರ್ಣಿ, ಶ್ರೀರಂಗ ಪುರಾಣಿಕ, ಸತೀಶ ಮಣ್ಣೂರು, ಶಾಂಭವಿ ಕುಲಕರ್ಣಿ, ದಾನೇಶ್ವರಿ ಆಲಾಳೆ, ಸೋನು ಕುಲಕರ್ಣಿ ಸೇರಿದಂತೆ ಮುಂತಾದವರು ಉಪಸ್ಥಿತರಾಗಿದ್ದರು.

### ಶಿವಶರಣೆ ಅಕ್ಕಮಹಾದೇವಿ ಮೂರ್ತಿ ಪ್ರಾಣ ಪ್ರತಿಷ್ಟಾಪನೆಯ 3ನೇಯ ವಾರ್ಷಿಕೋತ್ಸವ

# ಮುಳಸಾವಳಗಿಯಲ್ಲಿ ಭಕ್ತಿಭಾವ ಮೆರೆದ ಮಹಿಳೆಯರು

■ ಉದಯರಶ್ಮಿ ದಿನಪತ್ರಿಕೆ



ದೇವರಹಿಪ್ಪರಗಿ: ಮಹಾಶಿವಶರಣೆ ಅಕ್ಕಮಹಾದೇವಿಯವರ ಮೂರ್ತಿ ಪ್ರಾಣ ಪ್ರತಿಷ್ಠಾಪನೆಯ ಮೂರನೇ ವರ್ಷದ ವಾರ್ಷಿಕೋತ್ಸವ ಭಕ್ತಿಭಾವದೊಂದಿಗೆ ಅತ್ಯಂತ ವಿಜೃಂಭಣೆಯಿಂದ ಜರುಗಿತು.

ತಾಲ್ಲೂಕಿನ ಮುಳಸಾವಳಗಿ ಗ್ರಾಮದ ಮಲ್ಲಯ್ಯನ ದೇವಸ್ಥಾನದಲ್ಲಿ ಶ್ರಾವಣ ಶುಕ್ರವಾರದ ಅಂಗವಾಗಿ ಮಹಾಶಿವಶರಣೆ ಅಕ್ಕಮಹಾದೇವಿಯವರ ಮೂರ್ತಿ ಪ್ರಾಣ ಪ್ರತಿಷ್ಠಾಪನೆಯ ಮೂರನೇ ವರ್ಷದ ವಾರ್ಷಿಕೋತ್ಸವ ಹಲವಾರು ವೈಶಿಷ್ಟ್ಯಗಳಿಂದ ಗಮನಸೆಳೆಯಿತು.

ಸಾಕ್ಷಾತ್ ಅಕ್ಕಮಹಾದೇವಿಯೇ ಕುಳಿತಿರುವಂತೆ ಅಕ್ಕಮಹಾದೇವಿ ವೇಷಧಾರಿಯನ್ನುಕ್ಕಟರನಲ್ಲಿ ಕುಳ್ಳಿರಿಸಿ ಗ್ರಾಮದಲ್ಲಿ ಮೆರವಣಿಗೆ ಮಾಡಲಾಯಿತು.

ಸಕಲ ವಾದ್ಯ ವೈಭವ, ಸುಮಂಗಲೆಯರ ಕಳಶ, ಶ್ರೀಶೈಲ ಮಲ್ಲಯ್ಯನ ಗೀತೆಗಳಿಗೆ ಮುದ್ದುಮಕ್ಕಳ ಕೋಲಾಟ, ಮಾತೆಯರಿಂದ ಅಕ್ಕಮಹಾದೇವಿಯ ವಚನ ವೈಭವ ನೋಡುಗರ ಮನಸೆಳೆದವು. ನಂತರ ಎಲ್ಲಾ ಭಕ್ತಾದಿಗಳಿಗೆ ಪ್ರಸಾದ ವ್ಯವಸ್ಥೆ ಜರುಗಿತು.

ಕಸ್ತೂರಿ ರೋಡಗಿ, ಶರಣಮ್ಮ ಬಿರಾದಾರ, ರೇಣುಕಾ ಬಿರಾದಾರ, ಪಾರ್ವತಿ ಉಕುಮನಾಳ, ಕಮಲಾಬಾಯಿ ರೋಡಗಿ, ಶಾಂತಾಬಾಯಿ ಗಬ್ಬೂರ, ಅನಿತಾ ಬಿರಾದಾರ, ಭಾಗೀರಥಿ ಆಲಗೂರ, ನೀಲಮ್ಮಕೊಟೀನ, ಶಂಕ್ರೆಮ್ಮ ಬಸರಕೋಡ, ಪಾರ್ವತಿ ಹಚಡದ, ಭಾರತಿ ಗಬ್ಬೂರ, ಕಲಾವತಿ ಮನಗೂಳಿ, ಪಿಕೆಪಿಎಸ್ ಅಧ್ಯಕ್ಷ ಸಂಗನಗೌಡ ಬಿರಾದಾರ, ಬಿ.ಎಸ್.ಪೊಲೇಶಿ, ಶರಣಯ್ಯ ಮಂಗಲಗಿ, ಕಸಾಪ ಮಾಜಿಅಧ್ಯಕ್ಷ ಜಿ.ಪಿ.ಬಿರಾದಾರ, ಹಣಮಂತ ಹಿರೂರ, ಶಿವಾನಂದ ಹೊನ್ನಳ್ಳಿ, ಮಲ್ಲನಗೌಡ ಬಿರಾದಾರ, ಸಿದ್ದು ಹದರಿ, ಉಮೇಶ ರೋಡಗಿ, ದಾವಲಸಾಬ ಗಂಗೂರ, ಬಸವರಾಜ ಬಮ್ಮನಳ್ಳಿ, ವಿಜಯಕುಮಾರ ತಳವಾರ, ಬಸವರಾಜ ನಾಟೀಕಾರ, ಜಾವೀದ ಮಕಾನದಾರ, ಪರಶುರಾಮ ನಾಯ್ಕೋಡಿ ಇದ್ದರು.

# ಸೆ.6ರಂದು ಎಚ್.ಟಿ.ಕುಲಕರ್ಣಿ ಗುರುಸ್ಮರಣೆ ಕಾರ್ಯಕ್ರಮ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ಶಿಕ್ಷಣ ಕ್ಷೇತ್ರದಲ್ಲಿ ತಮ್ಮದೇ ಆದ ಛಾಪು ಮೂಡಿಸಿ, ಸಾವಿರಾರು ವಿದ್ಯಾರ್ಥಿಗಳ ಬದುಕಿಗೆ ದಾರಿದೀಪವಾದ ಎಚ್.ಟಿ.ಕುಲಕರ್ಣಿ ಗುರುಗಳ ಸ್ಮರಣಾರ್ಥ, ಎಚ್.ಟಿ.ಕುಲಕರ್ಣಿ ಪ್ರತಿಷ್ಠಾನದ ವತಿಯಿಂದ ಸೆ.6ರಂದು ಮಾಂಗಲ್ಯ ಭವನದಲ್ಲಿ ಗುರುಸ್ಮರಣೆ ಕಾರ್ಯಕ್ರಮ ಹಾಗೂ ದೇಹದಾನ, ರಕ್ತದಾನ ಶಿಬಿರವನ್ನು ಆಯೋಜಿಸಲಾಗಿದ ಎಂದು ನಿವೃತ್ತ ದೈಹಿಕ ಶಿಕ್ಷಕ ಎಸ್. ಎಸ್.ಮಲ್ಲೇದ ಹೇಳಿದರು,

ಸಿಂದಗಿ ನಗರದ ಬಸವ ಪಟ್ಟಣದಲ್ಲಿಹಮ್ಮಿಕೊಂಡಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಗುರುಗಳ ಬೋಧನೆ, ಆದರ್ಶ ಹಾಗೂ ಸಮಾಜಮುಖಿ ಸೇವಾ ಮನೋಭಾವವನ್ನು ಸ್ಮರಿಸುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಗುರುಗಳು ತಮ್ಮ ಶಿಷ್ಯರ ಬದುಕಿನಲ್ಲಿ ಬೀರಿದ ಪ್ರಭಾವವನ್ನು ಸ್ಮರಿಸುವುದರ ಜೊತೆಗೆ, ಅವರ ಸಮಾಜಸೇವೆಯ ಆಶಯವನ್ನು ಮುಂದುವರಿಸುವ ನಿಟ್ಟಿನಲ್ಲಿ ದೇಹದಾನ ಮತ್ತು ರಕ್ತದಾನ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಈ ವೇಳೆ ಸುಭಾಸ ಪಾಟೀಲ ಮಾತನಾಡಿ, ಗುರುರಾಜ ಪಡಶೆಟ್ಟಿ, ಮಹಾಂತೇಶ ನೂಲಾನವರ, ಶೈಲಜಾ ಸ್ಥಾವರಮಠ ಮಾತನಾಡಿ, ಎಚ್.ಟಿ.ಕುಲಕರ್ಣಿ ಗುರುಗಳೊಂದಿಗೆ ಶಿಕ್ಷಣ ಪಡೆದ ಎಲ್ಲ ಶಿಷ್ಯರು, ಹಳೆಯ ವಿದ್ಯಾರ್ಥಿಗಳು ಹಾಗೂ ಅವರ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕ್ರಮದಲ್ಲಿ ಭಾಗವಹಿಸಿ, ಗುರುಗಳ ಸ್ಮರಣೆಯನ್ನು ಅರ್ಥಪೂರ್ಣವಾಗಿ ಆಚರಿಸಬೇಕು. ಅವರ ಎಲ್ಲ ಶಿಷ್ಯ ಬಳಗ ಪ್ರತಿ ನಿತ್ಯ ಸಿಂದಗಿಯ ಸಂಗಮೇಶ್ವರ ದೇವಸ್ಥಾನದಲ್ಲಿ ಸೇರಿಕೊಂಡು ಸಲಹೆ ಸೂಚನೆಗಳನ್ನು ನೀಡಬೇಕು ಎಂದು ಮನವಿ ಮಾಡಿದರು.

ಈ ವೇಳೆ ಸಿದ್ದು ಹದನೂರ, ನಾನಾಗೌಡ ಶಿವಣಗಿ, ಲಕ್ಷ್ಮಣ ಬಿರಗೊಂಡ, ಗೌರೀಶ ಹಯ್ಯಾಳಕರ, ಮಹಾಂತೇಶ ಕಲಶೆಟ್ಟಿ, ಉಸ್ಮಾನ ನಧಾಫ್, ಮುತ್ತು ಪಟ್ಟಣಶೆಟ್ಟಿ, ಮಲ್ಲಿಕಾರ್ಜುನ ಅಲ್ಲಾಪೂರ, ಸಾಗರ ಕಮತಗಿ, ಬಸವರಾಜ ಹಿರಬಾಶೆಟ್ಟಿ, ಶಾಂತೂ ರಾಣಾಗೋಳ, ರಾಘವೇಂದ್ರ ಜೋಷಿ, ಎಂ.ಬಿ.ಮಂದೇವಾಲಿ, ಸಂತೋಷ ಹೈಯಾಳಕರ, ಸಿದ್ದು ಉಪ್ಪಾರ, ರಾಜಶೇಖರ ಜೇವರಗಿ, ವಿಕ್ರಮ ಕುಲಕರ್ಣಿ, ಭಾಗೇಶ ಗೋಲಗೇರಿ, ಶಿವಾನಂದ ಶಿವಣಗಿ, ಇರ್ಷಾದ ನೇವಾರ, ಪ್ರಶಾಂತ ಕೆಂಭಾವಿ, ಎಸ್.ಎಲ್.ಸುಂಬಡ, ರಾಜಶೇಖರ ಬುಳ್ಳಾ ಸೇರಿದಂತೆ ಅವರ ಶಿಷ್ಯ ಬಳಗ ಉಪಸ್ಥಿತರಿದ್ದರು.

# ತಾತ್ಕಾಲಿಕ ಉಪನ್ಯಾಸಕ ಹುದ್ದೆಗಳಿಗೆ ಸಂದರ್ಶನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಧಾರವಾಡದ ಕೃಷಿ ವಿಶ್ವವಿದ್ಯಾಲಯಕ್ಕೆ ಒಳಪಡುವ ವಿಜಯಪುರದ ಕೃಷಿ ಮಹಾವಿದ್ಯಾಲಯದಲ್ಲಿ ಖಾಲಿಯಿರುವ ಸಹಾಯಕ ಪ್ರಾಧ್ಯಾಪಕ ಹಾಗೂ ಅರೆಕಾಲಿಕ ಉಪನ್ಯಾಸಕರ ಹುದ್ದೆಗಳನ್ನು 179 ದಿನಗಳ ಅವಧಿಗೆ ತಾತ್ಕಾಲಿಕವಾಗಿ ನೇಮಕ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಹಾಗೂ ಅರ್ಹ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಅರ್ಜಿ ಸಲ್ಲಿಸಿ, ಸೂಕ್ತ ದಾಖಲೆಗಳೊಂದಿಗೆ ನೇರ ಸಂದರ್ಶನಕ್ಕೆ ಹಾಜರಾಗಬಹುದು.

ಕೃಷಿ ಮೈಕ್ರೋಬಯಾಲಜಿ (ಅಸಿಸ್ಟಂಟ್ ಪ್ರೊ. ಅಗ್ರಿಲ್ ಮೈಕ್ರೋಬಯಾಲಾಜಿ) 01 ಹುದ್ದೆ (ಎಸ್ ಸಿ–1), ಕೃಷಿ ಅರ್ಥಶಾಸ್ತ್ರ (ಅಸಿಸ್ಟಂಟ್ ಪ್ರೊ. ಅಗ್ರಿಲ್ ಎಕಾನಾಮಿಕ್ಸ್) 01 ಹುದ್ದೆ (ಎಸ್ ಟಿ–1) ಹಾಗೂ ತೋಟಗಾರಿಕೆ (ಅಸಿಸ್ಟಂಟ್ ಪ್ರೊ. ಹಾರ್ಟಿಕಲ್ಚರ್) 01 ಹುದ್ದೆ (ಎಸ್ ಟಿ–1) ಈ ಮೂರು ಹುದ್ದೆಗೆ ನೇರ ಸಂದರ್ಶನ ಸೆ.11ರಂದು ಕ್ರಮವಾಗಿ ಬೆಳಿಗ್ಗೆ 10, ಗಂಟೆ ಹಾಗೂ ಮಧ್ಯಾಹ್ನ 2 ಗಂಟೆಗೆ. ನಡೆಯಲಿದೆ.

ಕೃಷಿ ವಿಸ್ತರಣೆ (ಅಸಿಸ್ಟಂಟ್ ಪ್ರೊ. ಅಗ್ರಿಲ್ ಎಕ್ಸಟೆನ್ಸನ್ : 01 ಹುದ್ದೆ (ಎಸ್ ಟಿ–1) ಸಂದರ್ಶನ ಸೆ. 12 ರಂದು ಬೆಳಿಗ್ಗೆ 10 ಗಂಟೆಗೆ, ಕನ್ನಡ ಅರೆಕಾಲಿಕ : 01 ಹುದ್ದೆ (ಜಿಎಂ–1) ಸಂದರ್ಶನ ಸೆ.12ರಂದು ಬೆಳಿಗ್ಗೆ 11 ಗಂಟೆಗೆ. ನಡೆಯಲಿದೆ.

ಸಂಬಂಧಪಟ್ಟ ವಿಷಯಗಳಲ್ಲಿ ಶೇ. 55 ಕ್ಕಿಂತ ಕಡಿಮೆ ಇಲ್ಲದಂತೆ (ಸೆಮಿಸ್ಟರ್ ಪದ್ಧತಿಯಲ್ಲಾದರೆ ಶೇ. 70) ಸ್ನಾತಕೋತ್ತರ ಪದವಿ ಹೊಂದಿರಬೇಕು. ಜೊತೆಗೆ ಯುಜಿಸಿ/ಐಸಿಎಆರ್/ಸಿಎಸ್ ಐಆರ್ ನಡೆಸುವ ನೆಟ್, ಸ್ಲೆಟ್, ಎಸ್ ಇಟಿ ಪರೀಕ್ಷೆ ತೇರ್ಗಡೆಯಾಗಿರಬೇಕು ಅಥವಾ ಯುಜಿಸಿ ನಿಯಮಾವಳಿ ಪ್ರಕಾರ ಪಿಎಚ್ ಡಿ ಪದವಿ ಪಡೆದಿರಬೇಕು.

ಹೆಚ್ಚಿನ ವಿವರಗಳಿಗಾಗಿ ಮತ್ತು ಅರ್ಜಿ ಸಲ್ಲಿಸಲು ಕೃಷಿ ವಿಶ್ವವಿದ್ಯಾಲಯದ ಅಧಿಕೃತ ವೆಬ್ ಸೈಟ್ ಅಥವಾ ವಿಜಯಪುರದ ಕೃಷಿ ಮಹಾವಿದ್ಯಾಲಯದ ಡೀನ್ ಆವರಣ ಮುಖ್ಯಸ್ಥರ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಕೃಷಿ ಮಹಾವಿದ್ಯಾಲಯದ ವಿದ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶುಲ್ಕ ಮರುಪಾವತಿ: ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ವತಿಯಿಂದ 2026–27ನೇ ಸಾಲಿನ ಎಸ್.ಎಸ್.ಎಲ್.ಸಿ ನಂತರದ ಉನ್ನತ ಶಿಕ್ಷಣ, ವೃತ್ತಿ ಶಿಕ್ಷಣ, ತಾಂತ್ರಿಕ ಶಿಕ್ಷಣ ಹಾಗೂ ಸ್ನಾತಕೋತ್ತರ ಪದವಿ ವ್ಯಾಸಂಗ ಮಾಡುತ್ತಿರುವ ಅರ್ಹ ವಿಶೇಷಚೇತನ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಅರ್ಹ ವಿಶೇಷಚೇತನ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 11 ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ ವಿಜಯಪುರ ಜಿಲ್ಲಾ ಸಂಯೋಜಕರಾದ ಶ್ರೀಮತಿ ಪ್ರತಿಭಾ (ಮೊ:9606151149), ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರಾದ ವಿಜಯಪುರ ತಾಲೂಕು ಪಂಚಾಯತಿಯ ರವಿ ರಾಠೋಡ (ಮೊ:9035553337), ಇಂಡಿ ತಾಲೂಕಿನ ಪರಶುರಾಮ ಭೋಸಲೆ (ಮೊ:9972441464), ಸಿಂಧಗಿ ತಾಲೂಕಿನ ಮುತ್ತುರಾಜ ಸಾತಿಹಾಳ (ಮೊ:9980019635), ಮುದ್ದೇಬಿಹಾಳ ತಾಲೂಕಿನ ಎಸ್.ಕೆ. ಘಾಟಿ (ಮೊ:9740682979) ಹಾಗೂ ಬಸವನ ಬಾಗೇವಾಡಿ ತಾಲೂಕು ಪಂಚಾಯತಿಯ ಶಿವಲೀಲಾ ಬಿರಾದಾರ (ಮೊ:8722135660) ಅವರನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಅಧಿಕಾರಿ ಪ್ರಕಟಣೆಯಲ್ಲಿ ಕೋರಿದ್ದಾರೆ.



# ಕೊಣ್ಣೂರ ಗ್ರಾಮಸ್ಥರಿಂದ ಸಚಿವ ಜಾರಕಿಹೋಳಿಗೆ ಮನವಿ

■ ಉದಯರಶ್ಮಿ ದಿನಪತ್ರಿಕೆ

**ಕೊಣ್ಣೂರ ಗ್ರಾಮದ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಕೂಡಲೇ ಸುಮಾರು 2 ಕೋಟಿ ಅನುದಾನ ಬಿಡುಗಡೆಗೆ ಆಗ್ರಹ**

ತಾಳಿಕೋಟೆ: ತಾಲೂಕಿನ ಕೊಣ್ಣೂರ ಗ್ರಾಮದ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಕೂಡಲೇ ಸುಮಾರು 2 ಕೋಟಿ ಅನುದಾನ ಬಿಡುಗಡೆ ಮಾಡಿಸಿ, ರಸ್ತೆಗಳನ್ನು ಅಭಿವೃದ್ಧಿಪಡಿಸಬೇಕೆಂದು ಕೊಣ್ಣೂರ ಗ್ರಾಮಸ್ಥರು ರವಿವಾರರಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರಿಗೆ ಮನವಿ ಸಲ್ಲಿಸಿದರು.

ವಿಜಯಪುರ ನಗರದ ಬಿಎಲ್‌ಡಿ ಗೆಸ್ಟೌಸ್‌ನಲ್ಲಿ ರವಿವಾರರಂದು ಸಚೀವ ಸತೀಶ ಜಾರಕಿಹೋಳಿ ಅವರು ಬೆಟ್ಟಿ ನೀಡಿದ ಸಂದರ್ಬದಲ್ಲಿ ಅಸ್ಕಿ ಪೌಂಡೇಶನ್ ಅಧ್ಯಕ್ಷ ಕಾಂಗ್ರೇಸ್ ಮುಖಂಡ ಸಿ.ಬಿ.ಅಸ್ಕಿ ಅವರ ನೇತೃತ್ವದಲ್ಲಿ ಗ್ರಾಮಸ್ಥರು ಸಚಿವರನ್ನು ಭೇಟಿಯಾಗಿ ಸನ್ಮಾನಿಸಿ ಗೌರವಿಸಿದರಲ್ಲದೇ ಇದೇ ಸಮಯದಲ್ಲಿ ಸಿ.ಬಿ.ಅಸ್ಕಿ ಅವರು ಕೊಣ್ಣೂರ ಗ್ರಾಮದ ರಸ್ತೆ ಸಮಸ್ಯೆಗಳ ಕುರಿತು ಸಚೀವರಿಗೆ ಮನವರಿಕೆ ಮಾಡಿದ ಅವರು ಕೊಣ್ಣೂರ ಗ್ರಾಮದ ಸರ್ಕಾರಿ ವಸತಿ ಪ್ರದೇಶದ ಸಮೀಪದಲ್ಲಿರುವ ಸುಮಾರು 300 ಮೀಟರ್ ಉದ್ದದ ನಾಲ್ಕು ಸಿಸಿ ರಸ್ತೆಗಳು ಸಂಪೂರ್ಣ ಹದಗೆಟ್ಟಿದ್ದು, ವಾಹನ ಹಾಗೂ ಸಾರ್ವಜನಿಕರ ಸಂಚಾರಕ್ಕೆ ತೀವ್ರ ತೊಂದರೆಯಾಗುತ್ತಿದೆ. ಈ ಭಾಗದಲ್ಲಿ ಚರಂಡಿ ವ್ಯವಸ್ಥೆಯೂ ಸಮರ್ಪಕವಾಗಿಲ್ಲದ ಕಾರಣ ಮಳೆಗಾಲದಲ್ಲಿ ಮತ್ತಷ್ಟು ಸಮಸ್ಯೆ ಉಂಟಾಗುತ್ತಿದೆ. ನಾಲ್ಕು ಆಂತರಿಕ ರಸ್ತೆಗಳ ಅಭಿವೃದ್ಧಿಗೆ ಸುಮಾರು 2 ಕೋಟಿ ಅನುದಾನದ ಅಗತ್ಯವಿದ್ದು, ತುರ್ತಾಗಿ ಅನುದಾನ ಬಿಡುಗಡೆ ಮಾಡಿ ರಸ್ತೆ ಅಭಿವೃದ್ಧಿ ಪಡಿಸಿಕೊಡಬೇಕೆಂದು ಮನವಿ ಮಾಡಿದ ಅವರು ಗ್ರಾಮದಲ್ಲಿ ಸಮರ್ಪಕವಾಗಿ ಅನುದಾನ ಲಭ್ಯವಾಗದ ಕಾರಣ ರಸ್ತೆ ಅಭಿವೃದ್ಧಿ ಕಾಮಗಾರಿಗಳು ನಿರೀಕ್ಷಿತ ಮಟ್ಟದಲ್ಲಿ ನಡೆಯುತ್ತಿಲ್ಲ. ಹದಗೆಟ್ಟ ರಸ್ತೆಗಳ ಮೂಲಕ ನಿತ್ಯ ನೂರಾರು ಶಾಲಾ ಮಕ್ಕಳು ಸಂಚರಿಸುತ್ತಿದ್ದು, ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ ಗ್ರಾಮದಲ್ಲಿ ಈಗಾಗಲೇ ಪ್ರಾಥಮಿಕ ಆರೋಗ್ಯ ಕೇಂದ್ರ, ಪ್ರೌಢಶಾಲೆ ಹಾಗೂ ಪ್ರಾಥಮಿಕ ಶಾಲೆಗಳು ಕಾರ್ಯನಿರ್ವಹಿಸುತ್ತಿವೆ. ಸುತ್ತಮುತ್ತಲಿನ ಹತ್ತಾರು ಗ್ರಾಮಗಳಿಂದ ವಿದ್ಯಾರ್ಥಿಗಳು ಪ್ರತಿನಿತ್ಯ ವಿದ್ಯಾಭ್ಯಾಸಕ್ಕಾಗಿ ಆಗಮಿಸುತ್ತಾರೆ. ಹೀಗಾಗಿ ಹದಗೆಟ್ಟ ರಸ್ತೆಯಿಂದ ವಿದ್ಯಾರ್ಥಿಗಳು, ಸಾರ್ವಜನಿಕರು ಹಾಗೂ ವಾಹನ ಸವಾರರು ತೊಂದರೆ ಅನುಭವಿಸುತ್ತಿದ್ದು, ರಸ್ತೆಗಳನ್ನು ಶೀಘ್ರ ಅಭಿವೃದ್ಧಿಪಡಿಸಿ ಅನುಕೂಲ ಕಲ್ಪಿಸಬೇಕೆಂದು ಗ್ರಾಮಸ್ಥರ ಪರವಾಗಿ ಮನವಿ ಮಾಡಿದರು.

ಮನವಿಗೆ ಸಕಾರಾತ್ಮಕವಾಗಿ ಸ್ಪಂದಿಸಿದ ಸಚಿವ ಸತೀಶ್ ಜಾರಕಿಹೊಳಿ ಅವರು, ಎರಡು ತಿಂಗಳೊಳಗಾಗಿ 2 ಕೋಟಿ ಅನುದಾನ ಕೊಣ್ಣೂರ ಗ್ರಾಮದ ರಸ್ತೆ ಅಭಿವೃದ್ಧಿಗಾಗಿಯೇ ಬಿಡುಗಡೆ ಮಾಡಿಸಿ ಕಾಮಗಾರಿಯನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಗ್ರಾಮಸ್ಥರಿಗೆ ಭರವಸೆ ನೀಡಿದರು.

ಈ ಸಮಯದಲ್ಲಿ ಗ್ರಾಂಪಂ ಮಾಜಿ ಉಪಾಧ್ಯಕ್ಷ ಶರಣಯ್ಯ ಹಿರೇಮಠ, ರಹಿಮಸಾಬ ಅವಟಿ, ಯಲ್ಲಪ್ಪ ಮಾದರ, ಅಸ್ಕಿ ಪೌಂಡೇಶನ್ ಉಪಾಧ್ಯಕ್ಷ ವಿರೇಶಗೌಡ ಅಸ್ಕಿ, ಶಾಂತಗೌಡ ಹಡಲಗೇರಿ, ಬಂದು ಮಡಿಕೇಶ್ವರ, ಇಮ್ರಾನ್ ಠಕ್ಕಳಕಿ, ಸಂಗನಗೌಡ ಬಿರಾದಾರ, ಶ್ರೀಧರ ಬಿರಾದಾರ, ಕುಮಾರ ಐನಾಪೂರ, ಮೊದಲಾದವರು ಉಪಸ್ಥಿತರಿದ್ದರು.

## ಜಗನ್ನಾಥ್‌ಗೆ ಗೌರವ ಡಾಕ್ಟರೇಟ್

ಕಲಬುರಗಿ: ನಗರದ ನ್ಯೂಟ್ರಿಷನ್ ತಜ್ಞ ಡಾ.ಜಗನ್ನಾಥ ಅವರಿಗೆ ಯುನೈಟೆಡ್ ಅಮೆರಿಕನ್ ಯುನಿವರ್ಸಿಟಿಯೂ ಗೌರವ ಡಾಕ್ಟರೇಟ್ ನೀಡಿ, ಗೌರವಿಸಿದೆ. ನ್ಯೂಟ್ರಿಷನ್ ಮತ್ತು ವೆಲ್ನೇಸ್ ಎಜ್ಯುಕೇಷನ್ ಕುರಿತು ಅವರು ಸಲ್ಲಿಸಿದ ಸೇವೆಯನ್ನು ಪರಿಗಣಿಸಿ ಡಾ.ಅಭಿನವ ವಾಸವಿ ಅವರು ಪ್ರಸ್ತಾವನೆ ಸಲ್ಲಿಸಿದ್ದರು. ಅವರ ಪ್ರಸ್ತಾವನೆ ಪರಿಗಣಿಸಿ ಪಾಂಡಿಚೇರಿಯಲ್ಲಿ ಇತ್ತೀಚೆಗೆ ನಡೆದ ವಿಶ್ವವಿದ್ಯಾಲಯದ ಕಾರ್ಯಕ್ರಮದಲ್ಲಿ ಗೌರವ ಡಾಕ್ಟರೇಟ್ ಪ್ರದಾನ ಮಾಡಲಾಗಿದೆ.

# ದೇಶದಲ್ಲಿ ವೃದ್ಧಾಶ್ರಮಗಳು ಬೆಳೆಯುತ್ತಿರುವುದು ಆತಂಕಕಾರಿ

## ಶಿರಶ್ಯಾಡ ಶಾಖಾ ಮಠದಲ್ಲಿ ಆಯೋಜಿಸಿದ್ದ ಹುಣ್ಣಿಮೆ ಬೆಳದಿಂಗಳು ಕಾರ್ಯಕ್ರಮದಲ್ಲಿ ಅಭಿನವ ಮುರುಘೇಂದ್ರ ಶ್ರೀ ಕಳವಳ

■ ಉದಯರಶ್ಮಿ ದಿನಪತ್ರಿಕೆ



ಇಂಡಿ: ದೇಶದಲ್ಲಿ ವೃದ್ಧಾಶ್ರಮಗಳು ಬೆಳೆಯುತ್ತಿರುವದು ಆತಂಕಕಾರಿ ವಿಷಯ ಎಂದು ಅರಿತು ಅವುಗಳನ್ನು ಕಿಂಚಿತ್ತಾದರೂ ಕಡಿಮೆಗೊಳಿಸುವ ನಿಟ್ಟಿನಲ್ಲಿ ನಮ್ಮ ಮಠದಲ್ಲಿ ಪ್ರತೀ ತಿಂಗಳು ಹುಣ್ಣಿಮೆಯ ದಿನದಂದು 60 ವರ್ಷಗಳ ಕಾಲ ಮಾದರಿಯಾಗಿ ಕುಟುಂಬದ ಹೊಣೆ ಹೊತ್ತು ಸಾಗಿರುವ ವೃದ್ಧ ದಂಪತಿಗಳನ್ನು ಆಯ್ಕೆ ಮಾಡಿ ಅವರಿಗೆ ಗೌರವ ಸಮರ್ಪಣೆ ಮಾಡಲಾಗುತ್ತಿದೆ ಎಂದು ಅಭಿನವ ಮುರುಘೇಂದ್ರ ಶಿವಾಚಾರ್ಯರು ಹೇಳಿದರು.

ಅವರು ಶುಕ್ರವಾರ ಸಾಯಂಕಾಲ ಇಂಡಿ ನಗರದ ಶಿರಶ್ಯಾಡ ಶಾಖಾ ಮಠದಲ್ಲಿ ಆಯೋಜಿಸಿದ್ದ 5ನೇ ಹುಣ್ಣಿಮೆ ಬೆಳದಿಂಗಳು ಕಾರ್ಯಕ್ರಮದ ಸಾನಿಧ್ಯತೆ ವಹಿಸಿ ಆಶೀರ್ವಚನ ನೀಡಿದರು.

ವೃದ್ಧರನ್ನು ಗೌರವಿಸುವದು, ಅವರ ಅನುಭವಗಳನ್ನು ಹಂಚಿಕೊಳ್ಳುವದರಿಂದ ಇಂದಿನ ಯುವಕರಲ್ಲಿ ತಮ್ಮ ಹಿರಿಯರ ಬಗ್ಗೆ ಗೌರವ ಮೂಡಲಿ, ಅವರನ್ನು ಚೆನ್ನಾಗಿ ನೋಡಿಕೊಳ್ಳಲಿ ಎಂಬುದು ನಮ್ಮ ಪ್ರಯತ್ನ ಎಂದರು.

ವಿಶ್ವದಲ್ಲಿಯೇ ಭಾರತೀಯ ಸಂಸ್ಕೃತಿ ಶ್ರೇಷ್ಠವಾದದ್ದು, ಅದನ್ನು ವಿದೇಶಿಯರು ಅನುಸರಿಸಲು ಪ್ರಯತ್ನಿಸುತ್ತಿದ್ದಾರೆ. ಆದರೆ ನಮ್ಮವರೇ ಅದನ್ನು ಮರೆಯುತ್ತಿದ್ದಾರೆ. ಕಾರಣ ನಮ್ಮ ಸಂಸ್ಕೃತಿ ನೆನಪಿಸಲು ಹುಣ್ಣಿಮೆ ಬೆಳದಿಂಗಳ ಕಾರ್ಯಕ್ರಮ ಹಮ್ಮಿಕೊಂಡಿದ್ದೇವೆ ಎಂದ ಅವರು ಈ ಕಾರ್ಯಕ್ರಮದಲ್ಲಿ ವೃದ್ಧ ದಂಪತಿಗಳಿಗಲ್ಲದೇ ಕೃಷಿಯಲ್ಲಿ ಸಾಧನೆ ಮಾಡಿದ ರೈತರಿಗೆ, ದೇಶ ರಕ್ಷಿಸುವ ಸೈನಿಕರಿಗೆ, ಶಿಕ್ಷಣ ತಜ್ಞರಿಗೆ, ಕ್ರೀಡೆಯಲ್ಲಿ ಸಧನೆ ಮಾಡಿದ ಕ್ರೀಡಾಪಟುಗಳಿಗೆ, ವಿಜ್ಞಾನಿಗಳಿಗೆ, ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಅಲ್ಲದೇ ಇನ್ನಿತರ ಇಲಾಖೆಗಳಲ್ಲಿಯ ಸಾಧಕರಿಗೆ ಕರೆದು ಅವರನ್ನು ಗೌರವಿಸಿ, ಅವರ ಅನುಭವಗಳನ್ನು ಹಂಚಿಕೊಳ್ಳುತ್ತಿದ್ದೇವೆ. ಇದರಿಂದ ನಮ್ಮ ಯುವಕರಿಗೆ ನಮ್ಮ ದೇಶದ ಸಂಸ್ಕೃತಿಯ ಅರಿವು ಆಗಲಿದೆ ಎಂದರು.

ಐಡಿಯಾ ಕಾಲೇಜಿನ ನಿರ್ದೇಶಕಿ ಪೂನಮ್ ಲಕ್ಷ್ಮೀಕಾಂತ ಕಟ್ಟೀಮನಿ ರಕ್ಷಾ ಬಂಧನ ವಿಷಯದ ಮೇಲೆ ಉಪನ್ಯಾಸ ನೀಡಿದರು.

ಶಿಕ್ಷಕಿ ಭಾಗ್ಯಜ್ಯೋತಿ ಭಗವಂತಗೌಡರ ಮಾತನಾಡಿದರು.

ನಗರದ ಸ್ಪಂದನಾ ಆಸ್ಪತ್ರೆಯ ಎಂ.ಡಿ. ಡಾ.ಲಕ್ಷ್ಮೀಕಾಂತ ಮೇತ್ರಿ ಅಧ್ಯಕ್ಷತೆ ವಹಿಸಿದ್ದರು. ವಿಜಯಪೂರ ಜಿಲ್ಲೆಯ ಅಲೆಮಾರಿ ಸಮುದಾಯದ ಅಧ್ಯಕ್ಷ ಸಂಜೀವಕುಮಾರ ದಶವಂತ, ರಾಜ್ಯ ರೈತ ಹಸಿರು ಸೇನೆಯ ರಾಜ್ಯದ ಉಪಾಧ್ಯಕ್ಷ ನಾಗನಾಥಗೌಡ ಬಿರಾದಾರ, ಡಾ.ರಾಜಶೇಖರ ಕೋಳೇಕರ, ರೇಷ್ಮೆ ಇಲಾಖೆಯ ನಿವೃತ್ತ ಅಧಿಕಾರಿ ಮಲ್ಲೇಶಪ್ಪ ಬಳಬಟ್ಟಿ, ಅನೀಲ ಏಳಗಿ, ಬಾಬು ಹಂಜಗಿ, ಅನಂತ ಜೈನ್ ಸೇರಿದಂತೆ ಇನ್ನಿತರರು ವೇದಿಕೆಯಲ್ಲಿದ್ದರು.

ಚಂದ್ರಕಾಂತ ಉಪ್ಪಿನ ಪ್ರಸಾದ ಸೇವೆ ಮಾಡಿದ್ದರು. ಕಾರ್ಯಕ್ರಮದಲ್ಲಿ 60 ವರ್ಷ ಪೂರೈಸಿದ ವೃದ್ದ ದಂಪತಿಗಳಾದ ನಿರ್ಮಲಾ ಮಲ್ಲೇಶಪ್ಪ ಬಳಬಟ್ಟಿ ಹಾಗೂ ಡಾ. ಪ್ರೀತಿ ಡಾ. ರಾಜಶೇಖರ ಕೋಳೇಕರ ಅವರಿಗೆ ಸನ್ಮಾನಿಸಲಾಯಿತು.

ಮಲ್ಲಿಕಾರ್ಜುನ ಬುರುಕುಲೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಎ.ಸಿ.ಹುಣಸಗಿ ನಿರೂಪಿಸಿದರು.

# ಬಿ.ಎಂ.ಪಾಟೀಲ ವೈದ್ಯಕೀಯ ಕಾಲೇಜು, ಆಸ್ಪತ್ರೆ ವೈದ್ಯರ ತಂಡದ ಸಾಧನೆ

## ಕ್ಲಿಷ್ಟಕರ ಮೆದುಳಿನ ಶಸ್ತ್ರಚಿಕಿತ್ಸೆ ಮೂಲಕ ಮಹಿಳೆಗೆ ಮರುಜೀವ ನೀಡುವಲ್ಲಿ ಯಶಸ್ವಿಯಾದ ವೈದ್ಯರು

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯ ಬಿ.ಎಂ.ಪಾಟೀಲ ವೈದ್ಯಕೀಯ ಕಾಲೇಜು, ಆಸ್ಪತ್ರೆಯ ವೈದ್ಯರ ತಂಡ ಬಡ ಮಹಿಳೆಯ ಕ್ಲಿಷ್ಟಕರ ಮೆದುಳಿನ ಶಸ್ತ್ರಚಿಕಿತ್ಸೆಯ ಮೂಲಕ ಮರುಜೀವ ನೀಡುವಲ್ಲಿ ಯಶಸ್ವಿಯಾಗಿದ್ದಾರೆ.

ಬಾಗಲಕೋಟೆ ಜಿಲ್ಲೆಯ ಹುನಗುಂದ ತಾಲೂಕಿನ ಚಿತ್ತರಗಿ ಗ್ರಾಮದ ರೇಣವ್ವ ನಾಲತವಾಡ(47 ವರ್ಷ) ತೀವ್ರ ಪ್ರಮಾಣದ ಗ್ರೇಡ್–4 ಸಬ್ ಅರಾಕ್ನಾಯ್ಡ್ ಹೆಮರೇಜ್ (SAH) ಹಾಗೂ ಬಲಭಾಗದ ಮಿಡಲ್ ಸೆರೆಬ್ರಲ್ ಆರ್ಟರಿ (MCA) ಬೈಫರ್ಕೇಶನ್ ಅನ್ಯುರಿಸಮ್ನಿಂದ ಬಳಲುತ್ತಿದ್ದರು. ಅನ್ಯುರಿಸಮ್ ಛಿದ್ರಗೊಂಡ ಪರಿಣಾಮ ಮೆದುಳಿನ ಸುತ್ತಲೂ ತೀವ್ರ ರಕ್ತಸ್ರಾವವಾಗಿದ್ದು, ಅವರ ಆರೋಗ್ಯ ಗಂಭೀರವಾಗಿತ್ತು. CT, ಆಂಜಿಯೋಗ್ರಫಿ ಪರೀಕ್ಷೆಯಲ್ಲಿ ಬಲ ಒಅಂ ಬೈಫರ್ಕೇಶನ್ ಭಾಗದಲ್ಲಿ ದ್ವಿಪ್ರಭೇದದ (Bi-lobed) ಅನ್ಯುರಿಸಮ್ ಪತ್ತೆಯಾಯಿತು. ಪರಿಸ್ಥಿತಿಯ ಗಂಭೀರತೆಯನ್ನು ಗಮನಿಸಿದ ವೈದ್ಯರು ರೋಗಿಯನ್ನು ತುರ್ತಾಗಿ ಮೈಕ್ರೋಸರ್ಜಿಕಲ್ ಚಿಕಿತ್ಸೆಗೆ ಒಳಪಡಿಸಿದರು.

ಅಲ್ಲದೇ, ವೈದ್ಯರು ಶಸ್ತ್ರಚಿಕಿತ್ಸೆಯ ವೇಳೆ ಅನ್ಯುರಿಸಮ್ನ ಕುತ್ತಿಗೆಯನ್ನು ಯಶಸ್ವಿಯಾಗಿ ಕ್ಲಿಪ್ ಮಾಡುವುದರ ಜೊತೆಗೆ, ಮೆದುಳಿಗೆ ರಕ್ತ ಪೂರೈಸುವ ಪ್ರಮುಖ MCA ಶಾಖೆಗಳು ಹಾಗೂ ಸೂಕ್ಷ್ಮ ಪರ್ಫೋರೇಟರ್ ರಕ್ತನಾಳಗಳನ್ನು ಸುರಕ್ಷಿತವಾಗಿ ಸಂರಕ್ಷಿಸಿದರು. ಗಂಭೀರ ಸ್ಥಿತಿಯಲ್ಲಿದ್ದರೂ ರೋಗಿಯ ಚೇತರಿಕೆ ಅತ್ಯಂತ ಉತ್ತಮವಾಗಿದ್ದು, ಶಸ್ತ್ರಚಿಕಿತ್ಸೆಯ ನಂತರ ಯಾವುದೇ ಹೊಸ ನರ ದೌರ್ಬಲ್ಯ ಕಂಡುಬಂದಿಲ್ಲ. ವಿಶೇಷವೆಂದರೆ, ಶಸ್ತ್ರಚಿಕಿತ್ಸೆಯ ಕೇವಲ ಏಳನೇ ದಿನವೇ ರೇಣವ್ವ ಅವರನ್ನು ಆಸ್ಪತ್ರೆಯಿಂದ ಡಿಸ್ಚಾರ್ಜ್ ಮಾಡಲಾಗಿದ್ದು, ಅವರು ಆರೋಗ್ಯವಾಗಿ ಮನೆಗೆ ಮರಳಿದ್ದಾರೆ ಎಂದು ವೈದ್ಯರು ತಿಳಿಸಿದ್ದಾರೆ.

ಇಡೀ ಚಿಕಿತ್ಸೆಯನ್ನು ಆಯುಷ್ಮಾನ್ ಭಾರತ ಯೋಜನೆಯಡಿ ನಡೆಸಲಾಗಿದ್ದು, ಆರ್ಥಿಕವಾಗಿ ಹಿಂದುಳಿದ ಕುಟುಂಬದ ಮಹಿಳೆಯೊಬ್ಬರಿಗೆ ಇಂಥ ಕ್ಲಿಷ್ಟಕರ ಮತ್ತು ಅತ್ಯಾಧುನಿಕ ನರಶಸ್ತ್ರಚಿಕಿತ್ಸೆ ವಿಜಯಪುರದಲ್ಲಿಯೇ ದೊರಕಿರುವುದು ಬಡವರು ಮತ್ತು ಆರ್ಥಿಕವಾಗಿ ಹಿಂದುಳಿದವರ ಪಾಲಿಗೆ ನೆರವಿನ ಹಸ್ತವಾಗಿ, ಜೀವ ಉಳಿಸುವ ಅತ್ಯಾಧುನಿಕ ವೈದ್ಯಕೀಯ ಸೇವೆಗಳನ್ನು ಬಿ.ಎಲ್.ಡಿ.ಇ ಸಂಸ್ಥೆ ಒದಗಿಸುತ್ತಿದೆ.

ತುರ್ತು ಪರಿಸ್ಥಿತಿಯಲ್ಲಿ ಸಮಯೋಚಿತ ರೋಗನಿರ್ಣಯ, ತಕ್ಷಣದ ಶಸ್ತ್ರಚಿಕಿತ್ಸೆ, ಪರಿಣತ ವೈದ್ಯಕೀಯ ತಂಡ ಹಾಗೂ ಸಮಗ್ರ ತೀವ್ರ ನಿಗಾ ಚಿಕಿತ್ಸೆಯ ಸಮನ್ವಯದಿಂದ ರೋಗಿಯ ಜೀವ ಉಳಿಸಲು ಸಾಧ್ಯವಾಗಿದೆ. ಇದು ಬಿ.ಎಲ್.ಡಿ.ಇ ಆಸ್ಪತ್ರೆಯ ವೈದ್ಯಕೀಯ ಪರಿಣತಿ ಮತ್ತು ತುರ್ತು ಚಿಕಿತ್ಸೆ ಸಾಮರ್ಥ್ಯಕ್ಕೆ ಸಾಕ್ಷಿಯಾಗಿದೆ.

ಈ ಅಪರೂಪದ ಹಾಗೂ ಕ್ಲಿಷ್ಟಕರ ಪ್ರಕರಣವನ್ನು ಯಶಸ್ವಿಯಾಗಿ ನಿರ್ವಹಿಸಿ, ರೇಣವ್ವ ಅವರ ಪ್ರಾಣ ಉಳಿಸಿ, ಕೇವಲ ಒಂದು ವಾರದಲ್ಲೇ ಆರೋಗ್ಯವಾಗಿ ಮನೆಗೆ ಮರಳುವಂತೆ ಮಾಡಿದ ಡಾ. ಮಲ್ಲಪ್ಪ ಹುಗ್ಗಿ ಹಾಗೂ ಬಿಎಲ್‌ಡಿಇ ಆಸ್ಪತ್ರೆಯ ವೈದ್ಯಕೀಯ ತಂಡಕ್ಕೆ ಕೈಗಾರಿಕೆ ಸಚಿವ, ಬಿ.ಎಲ್.ಡಿ.ಇ ಅಧ್ಯಕ್ಷ ಎಂ. ಬಿ. ಪಾಟೀಲ ಅವರು ಅಭಿನಂದನೆ ಸಲ್ಲಿಸಿದ್ದಾರೆ.

## ಬಬಲೇಶ್ವರದ ಗುರುಪಾದೇಶ್ವರ ಬೃಹನ್ಮಠದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಚಿವ ಎಂ.ಬಿ.ಪಾಟೀಲ ಹೇಳಿಕೆ

# ಬರದ ನಾಡಿನ ಹಣೆಪಟ್ಟಿ ತೆಗೆಯಲು ಶ್ರಮಿಸಿದ್ದೇನೆ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಮಠ ಮಾನ್ಯಗಳ ಪ್ರವಚನ, ಧಾರ್ಮಿಕ ಕಾರ್ಯಕ್ರಮಗಳಿಂದ ಸಮಾಜದಲ್ಲಿ ಉತ್ತಮ ನಡೆ ಮತ್ತು ಬಸವಾದಿ ಶರಣರ ದಾಸೋಹ ತತ್ವ ಎಲ್ಲೆಡೆ ನೆಲೆಗೊಳ್ಳುತ್ತಿದೆ ಎಂದು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಂ. ಬಿ. ಪಾಟೀಲ ಹೇಳಿದ್ದಾರೆ.

ಶನಿವಾರ ರಾತ್ರಿ ಬಬಲೇಶ್ವರ ಪಟ್ಟಣದ ಗುರುಪಾದೇಶ್ವರ ಬೃಹನ್ಮಠದಲ್ಲಿ ಶ್ರೀ ಗುರುಪಾದೇಶ್ವರ ಶಿವಯೋಗಿಗಳ 184ನೇ ಮಹಾಗಣಾರಾಧನೆ, ಡಾ. ಮಹಾದೇವ ಶಿವಾಚಾರ್ಯ ಮಹಾಸ್ವಾಮಿಗಳ ವಜ್ರಮಹೋತ್ಸವ ಹಾಗೂ ಉತ್ತರಾಧಿಕಾರಿ ಪೂಜ್ಯ ಮಲ್ಲಿಕಾರ್ಜುನ ದೇವರ ಪಟ್ಟಾಧಿಕಾರ ಅಂಗವಾಗಿ 'ತಿರಂಗಾ ಬುತ್ತಿ ಯಾತ್ರೆ'ಯನ್ನು ಮಠದ ಮಹಾದ್ವಾರದಲ್ಲಿ ಸ್ವಾಗತಿಸಿ, ನಂತರ ನಡೆದ ಭವ್ಯ ಪ್ರವಚನ ಸಮಾರಂಭದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

12ನೇ ಶತಮಾನವೇ ಬಬಲೇಶ್ವರ ಮಠದ ಕಾರ್ಯಕ್ರಮದಲ್ಲಿ ಮರುಕಳಿಸಿದಂತೆ ಗೋಚರಿಸುತ್ತಿದೆ. ತಾಯಂದಿರು ಬುತ್ತಿ ಉತ್ಸವವನ್ನು ಭಕ್ತಿ, ಶ್ರದ್ಧೆಯಿಂದ ಮಾಡಿದ್ದಾರೆ. ಈ ಸೇವೆಯಲ್ಲಿ ತಮ್ಮದೂ ಒಂದು ಅಗುಳಿನ ಪಾತ್ರವಿದೆ, ಅದೇನೆಂದರೆ ಇಲ್ಲಿಗೆ ನೀರು ಹರಿಸಿದ ತೃಪ್ತಿ ತಮ್ಮದು. ಸಮೃದ್ಧ ಬೆಳೆ ಬೆಳೆದು ಎಲ್ಲರೂ ಸುಖಿಯಾಗುತ್ತಿದ್ದಾರೆ. ಅಂಥ ಮನೆಗಳಿಂದ ಬಂದ ರೊಟ್ಟಿಗೆ ನೀರು ದೊರೆತ ನೆಮ್ಮದಿ ಇದೆ. ಸಿದ್ದೇಶ್ವರ ಶ್ರೀಗಳ ಆಶಯದಂತೆ ಬರದ ನಾಡಿನ ಹಣೆಪಟ್ಟಿ ತೆಗೆಯಲು ಶ್ರಮಿಸಿದ್ದೇನೆ ಎಂದು ಅವರು ಹೇಳಿದರು.

ವಿಜಯಪುರ ಭೀಕರ ಬರಗಾಲ ಪ್ರದೇಶವಾಗಿತ್ತು. ಜಿಲ್ಲೆಯಲ್ಲಿ ಭೂಮಿ ಕಳೆದುಕೊಂಡ ಅರ್ಧ ಭಾಗವೂ ನೀರಾವರಿ ಆಗಿರಲಿಲ್ಲ. ಬಬಲೇಶ್ವರ, ತಿಕೋಟಾಗಳಿಗೆ ಶಕ್ತಿ ಮೀರಿ ನೀರು ನೀಡಿದ್ದೇವೆ. ಇದಕ್ಕೆ ನಾವು ಮಾಜಿ ಸಿಎಂ ಸಿದ್ದರಾಮಯ್ಯರನ್ನು ನೆನೆಸಬೇಕು. ಈಗ ಬರಗಾಲವಿದ್ದರೂ ಇಲ್ಲಿ ಅದರ ಪರಿಣಾಮ ಕಡಿಮೆ. ಕೆರೆ, ಹಳ್ಳಗಳಿಗೆ ನೀರು ಸಿಕ್ಕಿವೆ. ಪ್ರಾಧಿಕಾರದ ಗೆಜೆಟ್ ನೋಟಿಫಿಕೇಷನ್‌ಗೂ ಮೊದಲೇ ನೀರಾವರಿ ಯೋಜನೆಗಳನ್ನು ಸಾಕಾರಗೊಳಿಸಿದ್ದು ಈಗ ಇತಿಹಾಸ. ಶ್ರೀ ಸಿದ್ದೇಶ್ವರ ಶ್ರೀಗಳ ನಂತರ ಮಣಕವಾಡಿ ಶ್ರೀಗಳ ಪ್ರವಚನ ಜನಮಾನಸ ಮುಟ್ಟುತ್ತಿದೆ. ಶ್ರೀಗಳು ಬಸವಾದಿ ಶರಣರ ವಿಚಾರಗಳನ್ನು ಎಲ್ಲೆಡೆ ತಲುಪಿಸುತ್ತಿದ್ದಾರೆ. ಅವರು ಮಣಕವಾಡಿಯಲ್ಲಿ ಆರಂಭಿಸಿರುವ ಆಧುನಿಕ ಶಾಲೆ ಅವರ ಶಕ್ತಿ, ಸಾಹಸವನ್ನು ಬಿಂಬಿಸುತ್ತದೆ ಎಂದು ಸಚಿವರು ಹೇಳಿದರು.

ವಚನಪಿತಾಮಹ ಡಾ. ಫ. ಗು. ಹಳಕಟ್ಟಿ, ಬಂಥನಾಳ ಶಿವಯೋಗಿ, ಶಾಂತವೀರ ಶ್ರೀಗಳು ಈ ಭಾಗದ ರತ್ನಗಳು. ಈಗಿನ ಮಹಾದೇವ ಶ್ರೀಗಳದ್ದು ಮಗುವಿನ ಮನಸ್ಸು. ಮಠಮಾನ್ಯಗಳಿಗೆ ತಮ್ಮ

ಸೇವೆ, ಸಹಕಾರ ನಿರಂತರ ಇರಲಿದೆ ಎಂದು ಅವರು ಭರವಸೆ ನೀಡಿದರು.

ಹಾವೇರಿಯ ಹುಕ್ಕೇರಿ ಮಠದ ಸದಾಶಿವ ಮಹಾಸ್ವಾಮಿಗಳು,

ಪ್ರವಚನ ನೀಡಿದ ಮಣಕವಾಡದ ಮೃತ್ಯುಂಜಯ ಶ್ರೀಗಳು, ವಿಜಯಪುರದ ಅಭಿನವ ಸಿದ್ಧಾರೂಢ ಶ್ರೀಗಳು ಮಾತನಾಡಿ, ಸಚಿವ ಎಂ. ಬಿ. ಪಾಟೀಲ ಅವರು ಆಕಾಶದಿಂದ ಬಿದ್ದ ನೀರನ್ನು ರೈತರಿಗೆ ನೀಡಿದ ಸಾಧಕ. ಬರಡು ಭೂಮಿಯಲ್ಲಿ ಬಂಗಾರ ಬೆಳೆವಂತಾಗಿದೆ ಎಂದು ರೈತರು ಇವರನ್ನು ಸ್ಮರಿಸುತ್ತಾರೆ. ಬೆಳೆವ ಸನ್ಯಾಸಿಗಳ ಹಿಂದೆಯೂ ಇವರಿದ್ದಾರೆ. ಶರಣ ಪರಂಪರೆ ಮುಂದುವರಿಸಿದ್ದಾರೆ ಎಂದು ಹೇಳಿದರು.

ಸಾನಿಧ್ಯ ವಹಿಸಿದ್ದ ಡಾ. ಮಹಾದೇವ ಶಿವಾಚಾರ್ಯರು ಆಶೀರ್ವಚನ ನೀಡಿದರು.

ಮನಗೂಳಿಯ ಶ್ರೀ ಅಭಿನವಸಂಗನಬಸವ ಶಿವಾಚಾರ್ಯರು, ಮಲ್ಲಿಕಾರ್ಜುನ ದೇವರು, ಮೈಸೂರಿನ ನಿರಂಜನ ದೇವರು, ಬಿಜೆಪಿ ಮುಖಂಡ ವಿಜುಗೌಡ ಪಾಟೀಲ ಉಪಸ್ಥಿತರಿದ್ದರು.

# ಸಂತ ಬಾಳು ಮಾಮಾ ಆದರ್ಶ & ಸಮಾಜಕ್ಕೆ ನೀಡಿದ ಸಂದೇಶ ನಮಗೆಲ್ಲ ಮಾದರಿ

■ ಉದಯರಶ್ಮಿ ದಿನಪತ್ರಿಕೆ

**ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಅಭಿಮತ**



ವಿಜಯಪುರ: ಮುಂದಿನ ಜಾತ್ರೆಯೊಳಗೆ ಕರಾಡದೊಡ್ಡಿಯಲ್ಲಿ ಶ್ರೀ ಬಾಳುಮಾಮಾ ಅವರ ಭವ್ಯ ಗುಡಿ ನಿರ್ಮಾಣವಾಗಲಿದೆ ಎಂದು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಹೇಳಿದ್ದಾರೆ.

ರವಿವಾರ ಕರಾಡದೊಡ್ಡಿಯಲ್ಲಿ ನಡೆಯುತ್ತಿರುವ ಶ್ರೀ ಬಾಳು ಮಾಮಾ ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಂಡು, ಸಂತ ಬಾಳು ಮಾಮಾ ಅವರ ಆಶೀರ್ವಾದ ಪಡೆದು ಅವರು ಮಾತನಾಡಿದರು.

ಸಂತ ಬಾಳು ಮಾಮಾ ಅವರು ಶ್ರೇಷ್ಠ ಸಂತರಾಗಿದ್ದು, ಅವರ ಸರಳ ಬದುಕು, ಆದರ್ಶಗಳು ಹಾಗೂ ಸಮಾಜಕ್ಕೆ ನೀಡಿದ ಸಂದೇಶಗಳು ನಮಗೆಲ್ಲ ಮಾದರಿಯಾಗಿವೆ. ಮುಂದಿನ ಸಲ ತಾವು ಇಲ್ಲಿಗೆ ಬರುವಷ್ಟರಲ್ಲಿ ಸಂತ ಬಾಳು ಮಾಮಾ ಅವರ ಭವ್ಯ ಗುಡಿ ನಿರ್ಮಾಣವಾಗಿರುತ್ತದೆ ಎಂದು ಅವರು ಭರವಸೆ ನೀಡಿದೆ.

ತಾಂಡಾದಲ್ಲಿ ಸಿಎಸ್‌ಆರ್ ಅನುದಾನದಡಿ ಎರಡು ಶಾಲಾ ಕೊಠಡಿಗಳನ್ನು ನಿರ್ಮಿಸುವುದರ ಜೊತೆಗೆ, ಮಕ್ಕಳಿಗೆ ಆಟಿಕೆ ಹಾಗೂ ಅಗತ್ಯ ಆಟದ ಸಲಕರಣೆಗಳನ್ನು ಒದಗಿಸಲಾಗುವುದು. ಗ್ರಾಮಸ್ಥರ ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಲಾಗುವುದು. ಸರಕಾರಿ ನೋಟಿಫಿಕೇಷನ್ ಪ್ರಕ್ರಿಯೆ ಪೂರ್ಣಗೊಂಡ ನಂತರ ಇಲ್ಲಿನ ತಾಂಡಾ ನಿವಾಸಿಗಳಿಗೆ ಭೂಮಿ ಹಸ್ತಾಂತರಿಸಲಾಗುವುದು. ಮಾನವರ ದೊಡ್ಡಿಯಲ್ಲಿ ಹೊಸ ಶಾಲೆಯನ್ನು ಆರಂಭಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವರು ತಿಳಿಸಿದರು.

ಮುಖಂಡ ಸೋಮನಾಥ ಕಳ್ಳಿಮನಿ ಮಾತನಾಡಿ, ಬಾಳು ಮಾಮಾ ಅವರಿಗೆ ಕುರಿಗಳೆಂದರೆ ಪ್ರೀತಿ. ಕುರಿ ಸಾಕಾಣೆಗಾರರು ಕುರಿ ಸಾಕಾಣಿಕೆ ಜೊತೆಗೆ ಶಿಕ್ಷಣವನ್ನೂ ಪಡೆಯಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕ ಪ್ರೊ. ರಾಜು ಆಲಗೂರ, ಮುಖಂಡರಾದ ಸುರೇಶ ಭಂಡಾರಿ, ಶಿವಾನಂದ ದಳವಾಯಿ, ಸಚಿನ ಲೋಖಂಡೆ, ರಂಗಾ ಬರಕಾರಿ, ಶ್ರೀಶೈಲ ದಳವಾಯಿ, ಸಾಯಪ್ಪ ಮಾನವರ, ದಯಾಜಿ ಮಾನೆ, ನಿಂಗು ಬೆಳ್ಳುಬ್ಬಿ, ಅಣ್ಣಪ್ಪ, ಪುಂಡಲೀಕ ಮಾನವರ, ರಂಗಾ ಬರಕಡೆ, ಗಣಪತಿ ಮಾನವರ, ಸೋಪಣ್ಣ, ಶಾಮು ಪಾಂಡೆ, ತಾಯಪ್ಪ, ಭೀಮಶಿ, ಗೋಪಾಲ, ಬಾಜಿರಾವ್, ಮುತ್ತಪ್ಪ ಡೊಂಬಾಳೆ, ಅಶೋಕಣ್ಣ ದಳವಾಯಿ, ಪೀರ್ ಪಟೇಲ ಪಾಟೀಲ, ಶಾಮು ಪಾಂಡೆ ಮುಂತಾದವರು ಉಪಸ್ಥಿತರಿದ್ದರು.

# ಸಚಿವ ರಾಯರೆಡ್ಡಿ ಹೇಳಿಕೆಗೆ ಡಾ.ಶಶಿಕಾಂತ ಪಟ್ಟಣ ಖಂಡನೆ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಇತ್ತೀಚೆಗೆ ಕುಕುನೂರಿನಲ್ಲಿ ಸಚಿವ ಬಸವರಾಜ ರಾಯರೆಡ್ಡಿ ಅವರು ಮೊಹಮ್ಮದ್ ಪೈಗಂಬರ ಜಯಂತಿಯಲ್ಲಿ ಮಾತನಾಡುತ್ತಾ ಇಸ್ಲಾಂ ಧರ್ಮ ಸರ್ವ ಶ್ರೇಷ್ಠ ಧರ್ಮ. ನಾನು ಹಜ್ ಯಾತ್ರೆಯಲ್ಲಿ ಪಾಲ್ಗೊಳ್ಳಬೇಕು ಎಂದಿರುವ ಹೇಳಿಕೆಯನ್ನು ಪುಣೆಯ ಬಸವ ತಿಳುವಳಿಕೆ ಮತ್ತು ಸಂಶೋಧನಾ ಕೇಂದ್ರದ ಅಧ್ಯಕ್ಷ ಡಾ.ಶಶಿಕಾಂತ ಪಟ್ಟಣ ಖಂಡಿಸಿದ್ದಾರೆ.

ಈ ಕುರಿತು ಸೋಮವಾರ ಪತ್ರಿಕಾ ಹೇಳಿಕೆ ನೀಡಿರುವ ಅವರು, ಸಚಿವರೆ ನಿಮ್ಮ ಬಾಲಿಶತನದ ಮಾತುಗಳು ನಮಗೆ ನಾಚಿಕೆ ತಂದಿದೆ. ಮುಸ್ಲಿಂ ಸಮುದಾಯದ ಓಲೈಕೆಗೆ ಮುಂದಾಗಿ ವೋಟ್ ರಾಜಕಾರಣಕ್ಕಾಗಿ ನೀವು ಹೀಗೆ ಹೇಳಿದಿರೋ ಹೇಗೆ? ಒಬ್ಬ ಸಮಾಜವಾದಿ ಹಿನ್ನೆಲೆಯಿಂದ ಬಂದ ನೀವು ಇಂತಹ ಸಣ್ಣ ಪುಟ್ಟ ವಿಚಾರಗಳಿಗೆ ನಿಮ್ಮ ಹಾಗೂ ಪಕ್ಷದ ವರ್ಚಸ್ಸಿಗೆ ಧಕ್ಕೆ ಉಂಟು ಮಾಡುವದು ಸರಿ ಅಲ್ಲ.

ನೀವು ಬಸವ ಧರ್ಮದಲ್ಲಿ ಹುಟ್ಟಿಕೊಂಡು ಹೀಗೆ ಹೇಳಿದರೆ ನಿಮಗೆ ಅದು ಶೋಭೆಯೇ? ಎಂದು ಪ್ರಶ್ನಿಸಿದ್ದಾರೆ.

ಹನ್ನೆರಡನೆಯ ಶತಮಾನದ ಕಲ್ಯಾಣ ನಾಡಿನ ಬಸವಾದಿ ಶರಣರು ಸಾರ್ವಕಾಲಿಕ ಸಮತೆ ಸಾರುವ ಕಾಯಕ ದಾಸೋಹ ತತ್ವಗಳ ಅಡಿಯ ಮೇಲೆ ಲಿಂಗಾಯತ ಎಂಬ ಹೊಸ ಧರ್ಮದ ವೈಚಾರಿಕ ಸಿದ್ಧಾಂತವನ್ನು ಜಗತ್ತಿಗೆ ಕೊಟ್ಟರು. ವರ್ಗ ವರ್ಣ ಲಿಂಗ ಬೇಧ ಆಶ್ರಮ ರಹಿತ ಸಮ ಸಮಾಜದ ಪರಿಕಲ್ಪನೆಯನ್ನು ಕೊಟ್ಟ ಬಸವಣ್ಣನವರನ್ನು ಮರೆತು ಅನ್ಯ ಧರ್ಮದ ಗುಣ ಗಾನ ಮಾಡುವ ನಿಮ್ಮ ಮೂರ್ಖತನದ ಪರಮಾವಧಿ ಬಗೆ ನಮಗೆಲ್ಲಾ ಕನಿಕರ ತಂದಿದೆ.

ಈ ಕೂಡಲೇ ನಿಮ್ಮ ತಪ್ಪು ಹೇಳಿಕೆ ಹಿಂಪಡೆದು ಲಿಂಗಾಯತ ಧರ್ಮದ ಬಸವ ಭಕ್ತರಲ್ಲಿ ಕ್ಷಮೆ ಕೇಳಬೇಕು ಎಂದು ಡಾ.ಶಶಿಕಾಂತ ಪಟ್ಟಣ ಆಗ್ರಹಿಸಿದ್ದಾರೆ.

# ದೇವರಹಿಪ್ಪರಗಿ ರಾಮತೀರ್ಥ ಜಾತ್ರೆಗೆ ಭಕ್ತರ ದಂಡು



■ ಉದಯರಶ್ಮಿ ದಿನಪತ್ರಿಕೆ

ದೇವರ ಹಿಪ್ಪರಗಿ: ರಾಮತೇರ ಎಂದೇ ಪ್ರಸಿದ್ಧವಾದ ರಾಮತೀರ್ಥ ಜಾತ್ರೆ ಸಹಸ್ರಾರು ಭಕ್ತವೃಂದದ ನಡುವೆ ಭಕ್ತಿ ಭಾವದೊಂದಿಗೆ ಜರುಗಿ–ತು.

ಪಟ್ಟಣದ ಹತ್ತಿರದಲ್ಲಿರುವ ಐತಿಹಾಸಿಕ ಹಿನ್ನೆಲೆಯ ರಾಮಲಿಂಗೇಶ್ವರ ದೇವಸ್ಥಾನ ಹಾಗೂ ತೀರ್ಥಕುಂಡವಿರುವ ರಾಮತೀರ್ಥ ಕ್ಷೇತ್ರದಲ್ಲಿ ಸಾಂಪ್ರದಾಯಿಕವಾಗಿ ಶ್ರಾವಣ ಮಾಸದ ಕೊನೆಯ ಸೋಮವಾರಕ್ಕಿಂತಲೂ ಮುಂಚಿನ ಸೋಮವಾರ ಜಾತ್ರೆ ಜರುಗುತ್ತದೆ. ಈ ಜಾತ್ರೆಯ ಅಂಗವಾಗಿ ದೇವರಹಿಪ್ಪರಗಿಯ ಕಲ್ಮೇಶ್ವರ ಹಾಗೂ ಕರಿಸಿದ್ದೇಶ್ವರರ ಪಲ್ಲಕ್ಕಿಗಳು ಸೇರಿದಂತೆ ಸುತ್ತಮುತ್ತಲಿನ ಒಟ್ಟು 09 ಗ್ರಾಮಗಳ 21 ಕ್ಕೂ ಹೆಚ್ಚಿನ ದೇವರುಗಳ ಪಲ್ಲಕ್ಕಿಗಳು ಡೊಳ್ಳು, ಹಲಿಗೆ, ಕಹಳೆ ಸೇರಿ ವಿವಿಧ ವಾಧ್ಯವೃಂದ ಸಹಿತ ಸಹಸ್ರಾರು ಭಕ್ತರೊಂದಿಗೆ ಆಗಮಿಸಿದವು. ನಂತರ ಕ್ಷೇತ್ರದ ತೀರ್ಥಕುಂಡದಲ್ಲಿ ಗಂಗಾಸ್ನಾನ ಹಾಗೂ ಎಲ್ಲ ಪೂಜಾ ವಿಧಿವಿಧಾನಗಳನ್ನು ನೆರವೇರಿಸಿ ನಂತರ ನೆರೆದ ಭಕ್ತರಿಗೆ ದರ್ಶನ ನೀಡಿದವು. ನಂತರ ಪ್ರಮುಖ ಪೂಜಾರಿಗಳಿಂದ ಭವಿಷ್ಯದ ಕುರಿತಾದ ಹೇಳಿಕೆಗಳು ಹೇಳಲ್ಪಟ್ಟವು.

ಜಾತ್ರೆಯಲ್ಲಿ ಪಡಗಾನೂರಿನ ಕೆಂಚರಾಯ, ಲಗಮವ್ವ, ಶಿವಣಗಿಯ ಮಡ್ಡಿಸಿದ್ಧ, ಅಮೋಘಸಿದ್ಧ, ನಿವಾಳಖೇಡದ ಲಕ್ಷ್ಮಿ, ಕಗ್ಗೋಡದ ತಿಪ್ಪರಾಯ, ಇಂಗಳಗಿಯ ಅಮೋಘಸಿದ್ಧ ಹಾಗೂ ಮುಳಸಾವಳಗಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ದೇವರ ಪಲ್ಲಕ್ಕಿಗಳು ಸೇರಿದ್ದವು.

ಈ ಸಂದರ್ಭದಲ್ಲಿ ಸುತ್ತಮುತ್ತಲಿನ ಗ್ರಾಮಗಳ ಭಕ್ತರು ಕುಟುಂಬ ಸಮೇತರಾಗಿ ಆಗಮಿಸಿ ರಾಮಲಿಂಗೇಶ್ವರನ ಜೊತೆಗೆ ಸೇರಿದ ಎಲ್ಲ ದೇವರ ದರ್ಶನ ಪಡೆದು ನಂತರ ಮನೆಯಿಂದ ತಂದ ಭೋಜನ ಸವಿದು ಸಾಯಂಕಾಲ ಮರಳಿ ಪಲ್ಲಕ್ಕಿಗಳೊಂದಿಗೆ ತಮ್ಮ ಸ್ವಸ್ಥಳಕ್ಕೆ ತೆರಳಿದರು.

ಪ್ರತಿ ವರ್ಷದಂತೆ ಈ ಬಾರಿಯು ಜಾತ್ರೆಯ ದಿನ ಸ್ವಲ್ಪ ಮಳೆ ಉದುರಿತು. ನಂತರ ಪಟ್ಟಣದಲ್ಲಿ ಸಾಯಂಕಾಲ ಆರಂಭಗೊಂಡ ಮಳೆ ಹಾಗೂ ಗಾಳಿಯ ನಡುವೆ ಶಿವನಕಳ್ಳಿ ದೇವಾಲಯದಿಂದ ಕಲ್ಮೇಶ್ವರ ಹಾಗೂ ಕರಿಸಿದ್ದೇಶ್ವರ ಪಲ್ಲಕ್ಕಿಗಳ ಮೆರವಣಿಗೆ ಕಲ್ಮೇಶ್ವರ ದೇವಸ್ಥಾನದವರೆಗೆ ತೆರಳಿ ಜಾತ್ರೆ ಸಂಪನ್ನಗೊಂಡಿತು.

# ತಮಿಳುನಾಡಿಗೆ ಕಬಿನಿ ನೀರು ಬಿಡುಗಡೆಗೆ ರೈತರ ವಿರೋಧ



■ ಉದಯರಶ್ಮಿ ದಿನಪತ್ರಿಕೆ

ಎಚ್ ಡಿ ಕೋಟೆ: ತಮಿಳುನಾಡಿಗೆ ಕಬಿನಿ ನದಿ ನೀರು ಬಿಡುಗಡೆ ವಿರೋಧಿಸಿ ಸೋಮವಾರ ವಿವಿಧ ರೈತಪರ ಸಂಘಟನೆಗಳು ಕಬಿನಿ ಕಾರ್ಯಪಾಲಕ ಅಭಿಯಂತರರ ಕಚೇರಿ ಎದುರು ಪ್ರತಿಭಟನೆ ನಡೆಸಿದವು.

ಅವಳಿ ತಾಲೂಕಿನ ಜನ ಕುಡಿಯಲು ನೀರಿಲ್ಲದೆ ತೊಂದರೆ ಅನುಭವಿಸುತ್ತಿದ್ದಾರೆ. ಕೆರೆ ಕಟ್ಟೆಗಳು ಒಣ–ಗಿಹೋಗಿದ್ದು, ಜಾನುವಾರುಗಳಿಗೆ ನೀರು, ಮೇವು ಪೂರೈಸಲಾರದೆ ಕಷ್ಟ ಪಡುತ್ತಿದ್ದಾರೆ. ಜನತೆ ಇಷ್ಟೆಲ್ಲ ತೊಂದರೆ ಅನುಭವಿಸುತ್ತಿರುವಾಗ ಇಲ್ಲಿನ ಡ್ಯಾಂ ನೀರನ್ನ ತಮಿಳುನಾಡಿಗೆ ಹರಿಸುವುದು ಎಷ್ಟು ಸೂಕ್ತ ಎಂದು ಪ್ರಶ್ನಿಸಿದರು. ಕೂಡಲೇ ತಮಿಳುನಾಡಿಗೆ ಹ–ರಿಯುತ್ತಿರುವ ನೀರನ್ನು ನಿಲ್ಲಿಸಬೇಕು. ಇಲ್ಲವಾದಲ್ಲಿ ಉಗ್ರ ಹೋರಾಟ ಮಾಡಬೇಕಾಗುತ್ತದೆ ಎಂದು ರೈತರು ಎಚ್ಚರಿಕೆ ನೀಡಿದರು.

ಕರ್ನಾಟಕ ರಾಜ್ಯ ರೈತ ಕಲ್ಯಾಣ ಸಂಘದ ರಾಜ್ಯಾಧ್ಯಕ್ಷ ಭೂಮಿಪುತ್ರ ಚಂದನ್ ಗೌಡ ಮಾತನಾಡಿ, ಯಾವ ಮಾನದಂಡದ ಆದರದ ಮೇಲೆ ಕಬಿನಿ ಡ್ಯಾಂವೊಂದರಿಂದಲೇ ತಮಿಳುನಾಡಿಗೆ ನೀರು ಹರಿಸುತ್ತಿದ್ದೀರಾ? ಕಾವೇರಿ ಕೊಳ್ಳದ ಇತರ ಜಲಾಶಯಗಳನ್ನೂ ಹೊರತುಪಡಿಸಿ, ಈ ಒಂದು ಜಲಾಶಯದಿಂದಲೇ ಯಾಕೆ ನೀರು ಹರಿಸುತ್ತಿದ್ದಾರಾ ಎಂದು ಪ್ರಶ್ನಿಸಿದರು.

ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯಾಧ್ಯಕ್ಷ ಬಡಗಲಪುರ ನಾಗೇಂದ್ರ ಮಾತನಾಡಿ, ಕಬಿನಿ ಅಣೆಕಟ್ಟೆ ನಿರ್ಮಾಣ ಆದಾಗ 33 ಹಾಡಿಗಳು ಮುಳುಗಡೆಯಾದವು. 40ಕ್ಕೂ ಹೆಚ್ಚು ಹಳ್ಳಿಗಳು ಸ್ಥಳಾಂತರ ಆದವು. ಅನೇಕ ಮಂದಿ ರೈತರು ಫಲವತ್ತಾದ ಭೂಮಿ ಕಳೆದುಕೊಂಡರು. ಮುಳುಗಡೆ ಸಂತ್ರಸ್ತರಿಗೆ ಬೇರೆ ಕಡೆ 2–3 ಎಕರೆ ಭೂಮಿ ನೀಡಲಾಗಿದೆ. ಆದರೆ ಇಲ್ಲಿಯವರಿಗೆ ಅವರಿಗೆ ಸ್ವಾಧೀನ ಕೊಟ್ಟಿಲ್ಲ. ಈಗಲೂ ರೈತರು ಸಾಗುವಳಿ ಪತ್ರಕ್ಕಾಗಿ ಅಲೆದಾಡುತ್ತಿದ್ದಾರೆ ಎಂದು ಆರೋಪಿಸಿದರು.

ಕೊನೆಗೂ ರೈತರ ಪ್ರತಿಭಟನೆಗೆ ಮಣಿದ ಅಧಿಕಾರಿಗಳು ತಮಿಳುನಾಡಿಗೆ ಪ್ರತಿ ನಿತ್ಯ ಕಬಿನಿ ಜಲಾಶಯದಿಂದ ತಮಿಳುನಾಡಿಗೆ ಹರಿಯುತ್ತಿದ್ದ 6.600 ಕ್ಯೂಸೆಕ್ ನೀರು ಪೈಕಿ 3 ಸಾವಿರ ಕ್ಯೂಸೆಕ್ ನೀರು ಕಡಿತ ಮಾಡಿದರು.

# 34 ಗ್ರಾಮೀಣ ಡಾಕ್ ಸೇವಕ ಹುದ್ದೆಗಳಿಗೆ ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಭಾರತೀಯ ಅಂಚೆ ಇಲಾಖೆಯ ವಿಜಯಪುರ ಅಂಚೆ ವಿಭಾಗದ ವ್ಯಾಪ್ತಿಯ ವಿವಿಧ ಅಂಚೆ ಕಚೇರಿಗಳಲ್ಲಿ ಖಾಲಿ ಇರುವ ಒಟ್ಟು 34 ಗ್ರಾಮೀಣ ಡಾಕ್ ಸೇವಕ (ಜಿಡಿ–ಎಸ್), ಶಾಖಾ ಅಂಚೆ ಪಾಲಕ (ಬಿಪಿಎಂ) ಹಾಗೂ ಸಹಾಯಕ ಅಂಚೆ ಪಾಲಕ (ಎಬಿಪಿಎಂ) ಹುದ್ದೆಗಳ ನೇಮಕಾತಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಈ ನೇಮಕಾತಿಯು 10 ನೇ ತರಗತಿಯಲ್ಲಿ ಪಡೆದ ಅಂಕಗಳ ಆಧಾರದ ಮೇಲೆ ನಡೆಯಲಿದ್ದು, ಅರ್ಹ ಅಭ್ಯರ್ಥಿಗಳಿಗೆ ಆಗಸ್ಟ್ 31 ರಿಂದ ಸೆಪ್ಟೆಂಬರ್ 19 ರವರೆಗೆ ಆನ್‌ಲೈನ್ ಒನ್ ಟೈಮ್ ನೋಂದಣಿ (ಒಟಿಆರ್) ಮಾಡಲು ಅವಕಾಶ ನೀಡಲಾಗಿದೆ.

ಅದರಂತೆ, ಸೆಪ್ಟೆಂಬರ್ 2 ರಿಂದ ಸೆಪ್ಟೆಂಬರ್ 21 ರವರೆಗೆ ಆನ್‌ಲೈನ್ ಅರ್ಜಿ ಸಲ್ಲಿಕೆ ಮತ್ತು ಶುಲ್ಕ ಪಾವತಿಸಲು ಸಮಯಾವಕಾಶ ಕಲ್ಪಿಸಲಾಗಿದೆ. ಆಸಕ್ತ ಹಾಗೂ ಅರ್ಹ ಅಭ್ಯರ್ಥಿಗಳು ಭಾರತೀಯ ಅಂಚೆ ಇಲಾಖೆಯ ಅಧಿಕೃತ ಜಿಡಿಎಸ್ ನೇಮಕಾತಿ ಪೋರ್ಟಲ್ indiapost.gov.in/gdsonlineengagement ಮೂಲಕವೇ ಅರ್ಜಿ ಸಲ್ಲಿಸಬಹುದಾಗಿದೆ ಎಂದು ವಿಜಯಪುರ ಅಂಚೆ ವಿಭಾಗದ ಅಂಚೆ ಅಧೀಕ್ಷಕರಾದ ಎಂ. ಎಸ್. ತೊಗರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಜಯಪುರದಲ್ಲಿ ವೇದಾಂತ ಸೌಹಾರ್ದ ಸಹಕಾರಿ ಸಂಘ ಶುಭಾರಂಭ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ನಗರದ ಹುತಾತ್ಮ ವೃತ್ತದ ಬಳಿ ವೇದಾಂತ ಸೌಹಾರ್ದ ಸಹಕಾರಿ ಸಂಘ ಶುಭಾರಂಭ ಮಾಡಿತು.

ಸೌಹಾರ್ದ ಸಂಘದ ಸೇವೆಗೆ ಚಾಲನೆ ನೀಡಿದ ಸಹಕಾರ ಭಾರತಿ ಜಿಲ್ಲಾಧ್ಯಕ್ಷ ಶ್ರೀಹರ್ಷಗೌಡ ಪಾಟೀಲ ಮಾತನಾಡಿ, ಆರ್ಥಿಕವಾಗಿ ಹಿಂದುಳಿದವರನ್ನು ಆರ್ಥಿಕವಾಗಿ ಸಬಲರನ್ನಾಗಿಸಿ ಅವರನ್ನು ಸ್ವಾವಲಂಬಿಯಾಗಿಸುವಲ್ಲಿ ಸೌಹಾರ್ದ ಹಾಗೂ ಸಹಕಾರ ಸಂಘಗಳ ಪಾತ್ರ ಪ್ರಮುಖವಾಗಿದೆ ಎಂದರು. ವೇದಾಂತ ಕೇಸರಿ ಎಂದು ಶ್ರೀ ಮಲ್ಲಿಕಾರ್ಜುನ ಶ್ರೀಗಳನ್ನು ಕರೆಯಲಾಗುತ್ತಿತ್ತು. ಸಹಸ್ರಮಾನದ ಸಂತ ಶ್ರೀ ಸಿದ್ದೇಶ್ವರ ಸ್ವಾಮೀಜಿ ಅವರು ತಮ್ಮ ಗುರು ವೇದಾಂತ ಕೇಸರಿ ಶ್ರೀ ಮಲ್ಲಿಕಾರ್ಜುನ ಮಹಾಸ್ವಾಮಿಗಳ ಹೆಸರು ಕೇಳಿದಾಕ್ಷಣ ಅತ್ಯಂತ ಸಂತೋಷಪಡುತ್ತಿದ್ದರು, ಅಷ್ಟೊಂದು ಗುರುಭಕ್ತಿ ಅವರಲ್ಲಿತ್ತು, ಈಗ ಅವರ ಗುರುಗಳ ಹೆಸರಿನಲ್ಲಿಯೇ ಸೌಹಾರ್ದ ಸಂಘ ಆರಂಭಗೊಂಡಿರುವುದು ಅತ್ಯಂತ ಸಂತೋಷ ತಂದಿದೆ, ಈ ಸೌಹಾರ್ದ ಸಂಘ ಉತ್ತರೋತ್ತರವಾಗಿ ಬೆಳೆಯಲಿ ಎಂದು ಹಾರೈಸಿದರು.

ಮುಖ್ಯ ಅತಿಥಿಯಾಗಿದ್ದ ಡಿ.ವೈ.ಎಸ್.ಪಿ. ಹಾಗೂ ಲೇಖಕ ಬಸವರಾಜ ಯಲಿಗಾರ ಮಾತನಾಡಿ, ಸಹಕಾರ ಹಾಗೂ ಸೌಹಾರ್ದ ಸಂಘಗಳಿಗೆ ವಿಶ್ವಾಸವೇ ಜೀವಾಳ, ಆಡಳಿತ ಮಂಡಳಿ ಈ ವಿಶ್ವಾಸ ಗಳಿಸಿಕೊಂಡರೆ ಸಹಕಾರ ಸಂಘ ಉನ್ನತ ಮಟ್ಟಕ್ಕೆ ತಲುಪಲು ಸಾಧ್ಯ, ಪ್ರಸ್ತುತ ವೇದಾಂತ ಕೇಸರಿ ಸೌಹಾರ್ದ ಸಂಘದ ವಿಶ್ವಸ್ಥ ಮಂಡಳಿ ನಿರ್ದೇಶಕರು ಪ್ರಾಮಾಣಿಕತೆ ಹಾಗೂ ಜನಸೇವೆಯನ್ನೇ ತಮ್ಮ ಬದುಕಿನ ಧ್ಯೇಯವಾಗಿಸಿಕೊಂಡಿದ್ದಾರೆ,ಹೀಗಾಗಿ ಈ ಸೌಹಾರ್ದ ಸಂಘ ಶತಮಾನೋತ್ಸವ ಆಚರಿಸುವುದು ನಿಶ್ಚಿತ ಎಂದರು.

ಮುಖ್ಯ ಅತಿಥಿಯಾಗಿದ್ದ ಸಹಕಾರ ಒಕ್ಕೂಟದ ಉಪಾಧ್ಯಕ್ಷ ಚಂದ್ರಶೇಖರ ಕವಟಗಿ ಮಾತನಾಡಿ, ವಿಜಯಪುರ ನಗರದಲ್ಲಿ 800 ಕ್ಕೂ ಹೆಚ್ಚು ಸೌಹಾರ್ದಗಳು ನೊಂದಣಿಯಾಗಿವೆ, ಆದರೆ ಹೆಚ್ಚು ಕಡಿಮೆ 300 ಸಹಕಾರ ಸಂಘಗಳು ಮಾತ್ರ ಕಾರ್ಯ ನಿರ್ವಹಿಸುತ್ತಿವೆ, ಸಾಲ ವಸೂಲಾತಿ ದೊಡ್ಡ ತೊಡಕಾಗಿ ಅನೇಕ ಸೌಹಾರ್ದಗಳು ಸೇವೆಯಿಂದ ಹಿಂದಕ್ಕೆ ಸರಿಯುತ್ತಿವೆ, ಹೀಗಾಗಿ ಸಾಲ ಪಡೆದವರು ಸಹ ನಿಯಮಿತವಾಗಿ ಸಾಲ ಮರುಪಾವತಿ ಮಾಡಬೇಕು ಎಂದರು.

ಸಾನಿಧ್ಯ ವಹಿಸಿದ್ದ ಮಮದಾಪೂರ ವಿರಕ್ತಮಠದ ಮುರುಘೇಂದ್ರ ಮಹಾಸ್ವಾಮಿಜಿ, ಸಾನಿಧ್ಯ ವಹಿಸಿದ್ದ ಬಬಲಾದಿಯ ಸದಾಶಿವ ಚಂದ್ರಗಿರಿ ಮಠದ ಅಪ್ಪಯ್ಯ ಅಜ್ಜನವರು ಆಶೀರ್ವಚನ ನೀಡಿದರು.

ವಿಡಿಎ ಅಧ್ಯಕ್ಷ ಡಾ.ಗಂಗಾಧರ ಸಂಬಣ್ಣಿ, ಸಹಕಾರಿ ಧುರೀಣ ಗುರುಲಿಂಗಪ್ಪ ಅಂಗಡಿ, ಪಾಲಿಕೆ ಮಾಜಿ ಸದಸ್ಯ ಉಮೇಶ ವಂದಾಲ, ಸಹಕಾರಿ ಅಭಿವೃದ್ಧಿ ಅಧಿಕಾರಿ ಎಸ್. ಬಸವರಾಜ್, ವೇದಾಂತ ಕೇಸರಿ ಸೌಹಾರ್ದ ಅಧ್ಯಕ್ಷ ಮಲ್ಲು ಕಲಾದಗಿ, ಉಪಾಧ್ಯಕ್ಷ ಡಾ.ಆನಂದ ಚೌಧರಿ, ನಿರ್ದೇಶಕರಾದ ಡಾ.ಅರವಿಂದ ಧಾಣಕಶಿರೂರ, ಡಾ.ಮಲ್ಲಪ್ಪ ಹುಗ್ಗಿ, ಡಾ.ಬಸವರಾಜ ಬಡದಾಳ, ಡಾ.ಅಜೀತ್ ಗತಾಟೆ, ಶಂಕರರಾವ್ ಜೋಶಿ, ಈರಣ್ಣ ಅಳ್ಳಗಿ, ಡಾ.ಸುಧಾ ಕ–ರಿಲಿಂಗಣ್ಣನವರ, ಸಾವಿತ್ರಿ ಚಿಂಚಲಿ ಪಾಲ್ಗೊಂಡಿದ್ದರು.

# ಕ್ರೀಡೆಯಿಂದ ದೈಹಿಕ & ಮಾನಸಿಕ ಆರೋಗ್ಯ ವೃದ್ಧಿ : ಡಾ. ತೇಜಸ್ವಿನಿ

■ ಉದಯರಶ್ಮಿ ದಿನಪತ್ರಿಕೆ




ವಿಜಯಪುರ: ನಗರದ ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದಲ್ಲಿ ಮೇಜರ್ ಧ್ಯಾನ್ ಚಂದ್ ಅವರ ಜನ್ಮದಿನದ ಅಂಗವಾಗಿ ರಾಷ್ಟ್ರೀಯ ಕ್ರೀಡಾ ದಿನವನ್ನು ಆಗಸ್ಟ್ 28 ರಿಂದ ಆಗಷ್ಟ 30ರ ವರೆಗೆ ಮೂರು ದಿನಗಳ ಕಾಲ ನಾನಾ ಕ್ರೀಡಾ ಚಟುವಟಿಕೆಗಳೊಂದಿಗೆ ಆಚ–ರಿಸಲಾಯಿತು.

ವಿಶ್ವವಿದ್ಯಾಲಯದ ಕ್ರೀಡಾ ವಿಭಾಗದ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮಕ್ಕೆ ಒಳಾಂಗಣ ಕ್ರೀಡಾ ಸಂಕೀರ್ಣದಲ್ಲಿ ಚಾಲನೆ ನೀಡಲಾಯಿತು. ವೈದ್ಯಕೀಯ ವಿಭಾಗದ ಡೀನ್ ಹಾಗೂ ಪ್ರಾಚಾರ್ಯೆ ಡಾ. ತೇಜಸ್ವಿನಿ ವಲ್ಲಭ ಮಾತನಾಡಿ, ವಿದ್ಯಾರ್ಥಿಗಳ ದೈಹಿಕ ಹಾಗೂ ಮಾನಸಿಕ ಆರೋಗ್ಯ ಕಾಪಾಡುವಲ್ಲಿ ಕ್ರೀಡೆಯ ಪಾತ್ರ ಮಹತ್ವದ್ದಾಗಿದೆ. ಪ್ರತಿಯೊಬ್ಬರೂ ದೈನಂದಿನ ಜೀವನದಲ್ಲಿ ದೈಹಿಕ ಚಟುವಟಿಕೆಗಳಿಗೆ ಆದ್ಯತೆ ನೀಡಬೇಕು ಎಂದು ಹೇಳಿದರು.

ಬಿ.ಎಲ್.ಡಿ.ಇ. ಸಂಸ್ಥೆಯ ದೈಹಿಕ ಶಿಕ್ಷಣ ನಿರ್ದೇಶಕ, ಎಸ್. ಎಸ್. ಕೋರಿ ಅವರು ಮೇಜರ್ ಧ್ಯಾನ್ ಚಂದ್ ಅವರ ಜೀವನ, ಸಾಧನೆ ಹಾಗೂ ಭಾರತೀಯ ಹಾಕಿ ಕ್ಷೇತ್ರಕ್ಕೆ ಅವರು ನೀಡಿದ ಕೊಡುಗೆ ಕುರಿತು ಮಾತನಾಡಿದರು.

ಸ್ಕೂಲ್ ಆಫ್ ಅಲೈಡ್ ಹೆಲ್ತ್ ಸೈನ್ಸಸ್‌ನ ವಿದ್ಯಾರ್ಥಿನಿ ಶ್ರಾವಣಿ ಅವರು ರಾಷ್ಟ್ರೀಯ ಕ್ರೀಡಾ ದಿನದ ಪ್ರತಿಜ್ಞಾವಿಧಿ ಬೋಧಿಸಿದರು.

ಕ್ರೀಡೆಯಲ್ಲಿ ಉತ್ತಮ ಸಾಧನೆ ಮಾಡಿದ ಅರೀಜ್ ಅವರಿಗೆ ಅತ್ಯುತ್ತಮ ಮಹಿಳಾ ಕ್ರೀಡಾಪಟು ಪ್ರಶಸ್ತಿ ಹಾಗೂ ಮಿತಾಂಶು ಪಾಟೀಲ ಅವರಿಗೆ ಅತ್ಯುತ್ತಮ ಪುರುಷ ಕ್ರೀಡಾಪಟು ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಕ್ರೀಡಾ ವಿಭಾಗದ ಸಹಾಯಕ ನಿರ್ದೇಶಕರಾದ ಡಾ. ಮಹಾದೇವಿ ವಾಲಿ ನಿರೂಪಿಸಿದರು. ಕ್ರೀಡಾ ವಿಭಾಗದ ಡೀನ್, ಡಾ. ಗಿರೀಶ್ ಕುಲ್ಲೊಳ್ಳಿ ವಂದಿಸಿದರು.

ಬಳಿಕ ಫಿಟ್ ಇಂಡಿಯಾ ವಾಕ್‌ಥಾನ್ ಆಯೋಜಿಸಲಾಯಿತು.

ಎರಡನೇ ದಿನ ವಿದ್ಯಾರ್ಥಿಗಳಿಗಾಗಿ 'ಏಕ್ ಘಂಟಾ ಖೇಲ್ ಕೆ ಮೈದಾನ್ ಮೇ' ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಕ್ರಿಕೆಟ್, ಬ್ಯಾಡ್ಮಿಂಟನ್ ಹಾಗೂ ಟೇಬಲ್ ಟೆನಿಸ್ ಸೇರಿದಂತೆ ವಿವಿಧ ಕ್ರೀಡಾ ಚಟುವಟಿ–ಕೆಗಳಲ್ಲಿ ವಿದ್ಯಾರ್ಥಿಗಳು ಉತ್ಸಾಹದಿಂದ ಪಾಲ್ಗೊಂಡರು.

# ಸೆ.2ರಿಂದ ಜಿಲ್ಲಾಧಿಕಾರಿಗಳ ಕಛೇರಿ ಮುಂದೆ ಪ್ರತಿಭಟನೆ

## ಸಂಪೂರ್ಣ ವಿಜಯಪುರ ಜಿಲ್ಲೆಯ ಎಲ್ಲ ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲು ರೈತಸಂಘ ಆಗ್ರಹ

■ ಉದಯರಶ್ಮಿ ದಿನಪತ್ರಿಕೆ



ಚಡಚಣ: ವಿಜಯಪುರ ಜಿಲ್ಲಾಧಿಕಾ–ರಿಗಳ ಕಛೇರಿ ಮುಂದೆ ಹಮ್ಮಿಕೊಳ್ಳಲಾದ ಅನಿರ್ದಾಷ್ಟಾವಧಿ ಹೋರಾಟಕ್ಕೆ ಚಡಚಣ ತಾಲೂಕು ಸೇರಿದಂತೆ ಜಿಲ್ಲೆಯ ಎಲ್ಲ ತಾಲೂಕಿನ ಎಲ್ಲ ಸಂಘಟನೆಗಳು, ರೈತರು ಪಾಲ್ಗೊಂಡು ಸೆ. 2ರಿಂದ ಹಮ್ಮಿಕೊಳ್ಳಲಾದ ಹೋರಾಟವನ್ನು ಯಶಸ್ವಿಗೊಳಿಸಬೇಕು ಎಂದು ಚಡಚಣ ತಾಲೂಕಾ ರೈತ ಸಂಘದ ಅಧ್ಯಕ್ಷ ವಸಂತ ಭೈರಾಮಡಿ ಮನವಿ ಮಾಡಿದ್ದಾರೆ.

ವಿಜಯಪುರ ಜಿಲ್ಲೆಯ ಕೇವಲ 3 ತಾಲೂಕುಗಳನ್ನು ಬರ ಎಂದು ಘೋಷಿಸಿ ಇನ್ನುಳಿದ ತಾಲೂಕುಗಳಿಗೆ ಸರಕಾರ ಅನ್ಯಾಯ ಎಸಗಿದ್ದು, ಸಂಪೂರ್ಣ ಜಿಲ್ಲೆಯನ್ನು ಬರ ಎಂದು ಘೋಷಿಸಬೇಕು ಎಂದು ಆಗ್ರಹಿಸಿ ಸೆ. 2ರಿಂದ ಜಿಲ್ಲಾಧಿಕಾರಿಗಳ ಕಛೇರಿ ಮುಂದೆ ಅನಿರ್ದಾಷ್ಟಾವಧಿ ಹೋರಾಟ ಹಮ್ಮಿಕೊಳ್ಳಲಾಗಿದ್ದು, ಈ ಹೋರಾಟದಲ್ಲಿ ರೈತರ ಪ್ರಮುಖ ಬೇಡಿಕೆಗಳಾದ ಪ್ರತಿ ಎಕರೆಗೆ 50 ಸಾವಿರ ರೂ. ಬರಗಾಲ ಪರಿಹಾರ ಹಾಗೂ ಮಧ್ಯಂತರ ವಿಮೆ ಬಿಡುಗಡೆ, ಜಿಲ್ಲೆಯ ಉಳಿದ 10 ತಾಲೂಕುಗಳನ್ನು ಬರಪೀಡಿತ ತಾಲೂಕು ಎಂದು ಘೋಷಿಸಿಬೇಕು, ಜಿಲ್ಲೆಯ ಎಲ್ಲ ಕೆರೆ, ಕಾಲುವೆಗಳನ್ನು ತುಂಬಿಸಬೇಕು, ಜಾನುವಾರುಗಳಿಗೆ ಮೇವಿನ ವ್ಯವಸ್ಥೆ ಕಲ್ಪಿಸಬೇಕು ಹಾಗೂ ಪ್ರಧಾನ ಮಂತ್ರಿ ಫಸಲ ಬಿಮಾ ಯೋಜನೆಯ ಅವ್ಯವಹಾರದ ವಿರುದ್ಧ ಕ್ರಮ ಜರುಗಿಸಬೇಕು ಹಾಗೂ ಜಿಲ್ಲೆಯ ಉಳಿದ 10 ತಾಲೂಕುಗಳನ್ನು ಬರ ಎಂದು ಘೋಷಿಸುವವರೆಗೆ ಅನಿರ್ದಾಷ್ಟಾವಧಿ ಹೋರಾಟ ಹಮ್ಮಿಕೊಳ್ಳಲಾಗಿದ್ದು, ಚಡಚಣ ತಾಲೂಕು ಸೇರಿದಂತೆ ವಿಜಯಪುರ ಜಿಲ್ಲೆಯ ಎಲ್ಲಾ ತಾಲೂಕಿನ ಎಲ್ಲ ಸಂಘಟನೆಗಳು ಹಾಗೂ ರೈತರು, ಮಠಾಧೀಶರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಹೋರಾಟವನ್ನು ಯಶಸ್ವಿಗೊಳಿಸಬೇಕಾಗಿ ಚಡಚಣ ತಾಲೂಕಾ ರೈತ ಸಂಘದ ಅಧ್ಯಕ್ಷ ವಸಂತ ಭೈರಾಮಡಿ ಮನವಿ ಮಾಡಿದ್ದಾರೆ.

# ಮಾಹಿತಿ ಹಕ್ಕು ಕಾಯ್ದೆ ಆಡಳಿತದಲ್ಲಿ ಪಾರದರ್ಶಕತೆ, ಉತ್ತರದಾಯಿತ್ವಕ್ಕೆ ಪ್ರಮುಖ ಕಾಯ್ದೆ

■ ಉದಯರಶ್ಮಿ ದಿನಪತ್ರಿಕೆ




ವಿಜಯಪುರ: ಮಾಹಿತಿ ಹಕ್ಕು ಕಾಯ್ದೆಯು ಭಾರತದ ಪ್ರಜಾಸತ್ತಾತ್ಮಕ ವ್ಯವಸ್ಥೆಯಲ್ಲಿ ಆಡಳಿತದಲ್ಲಿ ಪಾರದರ್ಶಕತೆ ಮತ್ತು ಉತ್ತರದಾಯಿತ್ವವನ್ನು ಕಾಯ್ದುಕೊಳ್ಳುವಲ್ಲಿ ಅತ್ಯಂತ ಪ್ರಮುಖ ಕಾಯ್ದೆಯಾಗಿದೆ. ಈ ಕಾಯ್ದೆಯ ಮೂಲಕ ಪ್ರಜೆಗಳಿಗೆ ಸರ್ಕಾರದ ಆಡಳಿತದ ಕುರಿತು ಪ್ರಶ್ನಿಸುವ ಹಾಗೂ ಅಗತ್ಯ ಮಾಹಿತಿಯನ್ನು ಪಡೆಯುವ ಹಕ್ಕು ದೊರೆತಿದೆ ಎಂದು ಬೆಳಗಾವಿ ಪೀಠದ ರಾಜ್ಯ ಮಾಹಿತಿ ಆಯುಕ್ತರಾದ ಪ್ರಕಾಶ್ ನಾರಾಯಣ ಚೆನ್ನಾಳ ಅವರು ತಿಳಿಸಿದ್ದಾರೆ.

ವಿಶ್ವದ 112ಕ್ಕೂ ಹೆಚ್ಚು ದೇಶಗಳಲ್ಲಿ ಮಾಹಿತಿ ಹಕ್ಕಿಗೆ ಸಂಬಂಧಿಸಿದ ಕಾಯ್ದೆಗಳು ಜಾರಿಯಲ್ಲಿದ್ದು, ಈ ಪರಿಕಲ್ಪನೆಗೆ ಸುಮಾರು 300 ವರ್ಷಗಳ ಇತಿಹಾಸವಿದೆ. ಭಾರತದಲ್ಲಿ 2005ರಲ್ಲಿ ಮಾಹಿತಿ ಹಕ್ಕು ಕಾಯ್ದೆ ಜಾರಿಗೆ ಬಂದಿದ್ದು, ಅದೇ ವರ್ಷ ಕರ್ನಾಟಕದಲ್ಲಿಯೂ ಕಾಯ್ದೆಯನ್ನು ಅನುಷ್ಠಾನಗೊಳಿಸಲಾಯಿತು. ದೇಶದಲ್ಲಿಯೇ ಮಾಹಿತಿ ಹಕ್ಕು ಕಾಯ್ದೆಯನ್ನು ಪರಿಣಾಮಕಾರಿಯಾಗಿ ಜಾರಿಗೆ ತಂದ ರಾಜ್ಯಗಳ ಪೈಕಿ ಕರ್ನಾಟಕ ಮುಂಚೂಣಿಯಲ್ಲಿದ್ದು, ಪ್ರಕರಣಗಳ ವಿಲೇವಾರಿಯಲ್ಲಿಯೂ ಕರ್ನಾಟಕ ಮಾಹಿತಿ ಆಯೋಗವು ದೇಶದಲ್ಲೇ ಮೊದಲ ಸ್ಥಾನದಲ್ಲಿದೆ ಎಂದು ಅವರು ತಿಳಿಸಿದ್ದಾರೆ.

ಸಾರ್ವಜನಿಕ ಮಾಹಿತಿ ಅಧಿಕಾರಿಗಳು ನಿಗದಿತ ಅವಧಿಯೊಳಗೆ ಅರ್ಜಿದಾರರಿಗೆ ಸೂಕ್ತ ಮಾಹಿತಿಯನ್ನು ನೀಡದೆ ನಿರ್ಲಕ್ಷ್ಯ ವಹಿಸಿದಲ್ಲಿ, ಅಂತಹ ಅಧಿಕಾ–ರಿಗಳ ವಿರುದ್ಧ ದಂಡ ವಿಧಿಸುವ ಅಧಿಕಾರ ಮಾಹಿತಿ ಆಯೋಗಕ್ಕಿದೆ. ಸಕಾಲದಲ್ಲಿ ಮಾಹಿತಿ ನೀಡದೆ ದಂಡನೆಗೆ ಒಳಗಾಗುವ ಅಧಿಕಾರಿಗಳ ವಿರುದ್ಧ ಸರ್ಕಾರದ ಇತ್ತೀಚಿನ ನಿರ್ದೇಶನದಂತೆ, ಹೆಚ್.ಆರ್.ಎಂ.ಎಸ್. ವ್ಯವಸ್ಥೆಯ ಮೂಲಕ ದಂಡದ ಮೊತ್ತವನ್ನು ನೇರವಾಗಿ ಅವರ ವೇತನದಿಂದಲೇ ಕಡಿತಗೊಳಿಸುವ ಕ್ರಮ ಜಾರಿಗೆ ಬರಲಿದೆ.

ಆದ್ದರಿಂದ ಸಾರ್ವಜನಿಕ ಮಾಹಿತಿ ಅಧಿಕಾ–ರಿಗಳು ಮಾಹಿತಿ ಹಕ್ಕು ಕಾಯ್ದೆಯಡಿ ಸಲ್ಲಿಕೆಯಾಗುವ ಅರ್ಜಿಗಳನ್ನು ನಿರ್ಲಕ್ಷಿಸದೆ, ನಿಗದಿತ ಕಾಲಮಿತಿಯೊಳಗೆ ಸೂಕ್ತ ಹಾಗೂ ಸಮರ್ಪಕ ಮಾಹಿತಿಯನ್ನು ಒದಗಿಸುವ ಮೂಲಕ ಕಾಯ್ದೆಯ ಆಶಯವನ್ನು ಪರಿಣಾಮಕಾ–ರಿಯಾಗಿ ಅನುಷ್ಠಾನಗೊಳಿಸಬೇಕು.

ಬೆಳಗಾವಿ ವಿಭಾಗದ ಪೊಲೀಸ್, ಕಂದಾಯ, ಪಂಚಾಯತ್ ರಾಜ್ ಸೇರಿದಂತೆ ವಿವಿಧ ಇಲಾಖೆಗಳ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಸಕಾಲದಲ್ಲಿ ಮಾಹಿತಿ ನೀಡದ ಹಿನ್ನೆಲೆಯಲ್ಲಿ ದಂಡ ವಿಧಿಸಿ ಆದ–ೇಶಗಳನ್ನು ಹೊರಡಿಸಲಾಗಿದೆ ಎಂದು ರಾಜ್ಯ ಮಾಹಿತಿ ಆಯುಕ್ತರಾದ ಪ್ರಕಾಶ್ ನಾರಾಯಣ ಚೆನ್ನಾಳ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸೆ.2 ರಂದು ಶಿಶಿಕ್ಷು ಮೇಳಕ್ಕೆ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ:ನಗರದ ಬಿ.ಡಿ.ಪಿ.ಹೆಚ್.ಡಬ್ಲ್ಯೂ.ಎ. ಐಟಿಐ ಖೇಡ ಕಾಲೇಜು ಆವರಣದಲ್ಲಿ ಸೆ.2ರಂದು ಬೆಳಗ್ಗೆ 9 ರಿಂದ ಸಂಜೆ 5ರವರೆಗೆ ಶಿಶಿಕ್ಷು ಮೇಳ ಆಯೋಜಿಸಲಾಗಿದೆ.

ಐಟಿಐ ಸೇರಿದಂತೆ ವಿವಿಧ ತರಬೇತಿ ಪೂರ್ಣಗೊಳಿಸಿರುವ ಆಸಕ್ತ ಅಭ್ಯರ್ಥಿಗಳು Apprenticeship India ಪೋರ್ಟಲ್‌ನಲ್ಲಿ ನೋಂದಣಿ ಮಾಡಿಕೊಂಡು ಮೇಳದಲ್ಲಿ ಭಾಗವಹಿಸಬಹುದಾಗಿದೆ. ಉದ್ದಿಮೆದಾರರು ಸಹ Establishment Registration ಪೋರ್ಟಲ್‌ನಲ್ಲಿ ನೋಂದಣಿ ಮಾಡಿಕೊಂಡು ಮೇಳದ ಪ್ರಯೋಜನ ಮಡೆದುಕೊಳ್ಳಬಹುದಾಗಿದೆ. ಆಸಕ್ತ ಅಭ್ಯರ್ಥಿಗಳು ನಾಲ್ಕು ಪ್ರತಿಗಳ ಬಯೋಡಾಟಾ, ಅಗತ್ಯ ದಾಖಲೆ ಹಾಗೂ ಭಾವಚಿತ್ರದೊಂದಿಗೆ ಮೇಳಕ್ಕೆ ಹಾಜರಾಗಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 8073341505 ಸಂಪರ್ಕಿಸಬಹುದು ಅಥವಾ ಹತ್ತಿರದ ಯಾವುದೇ ಸರ್ಕಾರಿ, ಅನುದಾನಿತ ಅಥವಾ ಖಾಸಗಿ ಐಟಿ–ಐಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಉದ್ಯೋಗಾಧಿಕಾರಿಗಳ ಪ್ರಕಟಣೆ ತಿಳಿಸಿದೆ.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR